ಸಂಪುಟ 01 | ಸಂಚಿಕೆ 144 | ಸೋಮವಾರ 13 ಏಪ್ರಿಲ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಜಲಿಯನ್ ವಾಲಾಬಾಗ್ ಹತ್ಯಾಕಾಂಡ ಸ್ಮೃತಿ ದಿನ**

ಇದು ಏಪ್ರಿಲ್ 13, 1919 ರಂದು ಅಮೃತಸರದಲ್ಲಿ ನಡೆಯಿತು ಮತ್ತು ಇದನ್ನು ಅಮೃತಸರ ಹತ್ಯಾಕಾಂಡ ಎಂದೂ ಕರೆಯುತ್ತಾರೆ. ಈ ದಿನದಂದು, ಜನರಲ್ ಡಯರ್ ನೇತೃತ್ವದಲ್ಲಿ ಬ್ರಿಟಿಷ್ ಪಡೆಗಳು ಭಾರತದ ಪಂಜಾಬ್‌ನ ಅಮೃತಸರದಲ್ಲಿ ನಿರಾಯುಧ ಭಾರತೀಯರ ದೊಡ್ಡ ಗುಂಪಿನ ಮೇಲೆ ಗುಂಡು ಹಾರಿಸಿದವು. ನೂರಾರು ಜನರು ಸಾವನ್ನಪ್ಪಿದರು ಮತ್ತು ನೂರಾರು ಜನರು ಗಾಯಗೊಂಡರು.

**2) ವಲ್ಲಭಾಚಾರ್ಯ ಜಯಂತಿ**

ವಲ್ಲಭಾಚಾರ್ಯ ಜಯಂತಿ ಏಪ್ರಿಲ್ 13, ಸೋಮವಾರದಂದು ಆಚರಿಸಲಾಗುತ್ತದೆ. ಪುಷ್ಟಿಮಾರ್ಗದ ಸ್ಥಾಪಕರಾದ ಶ್ರೀ ವಲ್ಲಭಾಚಾರ್ಯರ ಜನ್ಮದಿನವನ್ನು ವೈಶಾಖ ಮಾಸದ ಕೃಷ್ಣ ಪಕ್ಷದ ಏಕಾದಶಿಯಂದು ಆಚರಿಸಲಾಗುತ್ತದೆ. ಇದು ವಲ್ಲಭ ಸಂಪ್ರದಾಯದ ಅನುಯಾಯಿಗಳಿಗೆ ಪ್ರಮುಖ ಹಬ್ಬವಾಗಿದ್ದು, ಶ್ರೀಕೃಷ್ಣನ ಭಕ್ತಿ ಮತ್ತು "ಶ್ರೀಕೃಷ್ಣ ಶರಣಂ ಮಮ" ಮಂತ್ರದ ಮಹತ್ವವನ್ನು ಸ್ಮರಿಸುವ ದಿನವಾಗಿದೆ.

## ಸುಭಾಷಿತ


ಪ್ರತಿಯಾಗಿ ಏನನ್ನೂ ಬಯಸಬೇಡಿ.
ಆದರೆ ನೀವು ಹೆಚ್ಚು ಕೊಟ್ಟಷ್ಟು ನಿಮಗೆ
ಹೆಚ್ಚು ಬರುತ್ತದೆ.

–ಸ್ವಾಮಿ ವಿವೇಕಾನಂದ

## ಸಿಇಟಿ–2026 :ಪ್ರವೇಶ ಪತ್ರ ಬಿಡುಗಡೆ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಎಂಜಿನಿಯರಿಂಗ್ ಸೇರಿದಂತೆ ಇತರ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಸಂಬಂ ಸಿದಂತೆ ಏ.23 ಮತ್ತು 24 ರಂದು ನಡೆಯುವ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಹಾಗೂ ಏ.22ರಂದು ನಡೆಯುವ ಕನ್ನಡ ಭಾಷಾ ಪರೀಕ್ಷೆಗೆ ಕರ್ನಾಟಕ ಪರೀಕ್ಷಾ ಪ್ರಾ ಕಾರವು ಪ್ರವೇಶ ಪತ್ರ ಬಿಡುಗಡೆ ಮಾಡಿದೆ.**




ಅರ್ಜಿ ಸಲ್ಲಿಸಿ, ಶುಲ್ಕ ಪಾವತಿಸಿರುವ ಅರ್ಹ ಅಭ್ಯರ್ಥಿಗಳು ಕೆಇಎ ವೆಬ್‌ಸೈಟ್‌ಗೆ ಭೇಟಿ ನೀಡಿ, ನಿಗದಿತ ಲಿಂಕ್ ಮೂಲಕ ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಳ್ಳಬಹುದು ಎಂದು ಪ್ರಾ ಕಾರದ ಪ್ರಕಟಣೆ ತಿಳಿಸಿದೆ. ಪ್ರವೇಶ ಪತ್ರದ ಜತೆಗೆ ಅಭ್ಯರ್ಥಿಗಳಿಗೆ ನೀಡಲಾಗುವ ಸೂಚನೆಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಹಾಗೂ ಮಾರ್ಗದರ್ಶನಗಳನ್ನು/ ಕಾರ್ಯವಿಧಾನಗಳನ್ನು ತಪ್ಪದೇ ಅನುಸರಿಸಲು ಸೂಚಿಸಲಾಗಿದೆ. ಹೊರನಾಡು ಮತ್ತು ಗಡಿನಾಡು ಅಭ್ಯರ್ಥಿಗಳಿಗೆ ಕನ್ನಡ ಭಾಷೆ ಪರೀಕ್ಷೆಯನ್ನು ಬೆಂಗಳೂರು, ಬೆಳಗಾವಿ ಮತ್ತು ಮಂಗಳೂರು ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುತ್ತದೆ ಎಂದು ಹೇಳಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಇನ್ನು ಮುಂದೆ ಪಿಯುಸಿ ವಿದ್ಯಾರ್ಥಿಗಳಿಗೂ ಉಚಿತ ಪಠ್ಯಪುಸ್ತಕ

**ಬೆಂಗಳೂರು: ಇದುವರೆಗೆ 10ನೇ ತರಗತಿಯವರೆಗೆ ಮಾತ್ರ ಇದ್ದ ಉಚಿತ ಪಠ್ಯಪುಸ್ತಕ ವಿತರಣೆ ಯೋಜನೆಯನ್ನು 2026–27ನೇ ಸಾಲಿನಿಂದ ಪದವಿ ಪೂರ್ವ (ಪಿಯು) ಕಾಲೇಜಿನ ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ. ಇನ್ನು ಮುಂದೆ ಎಲ್ಲಾ ಸರ್ಕಾರಿ ಪಿಯು ಕಾಲೇಜುಗಳ ವಿದ್ಯಾರ್ಥಿಗಳು ತಮ ಪಠ್ಯಪುಸ್ತಕಗಳನ್ನು ಉಚಿತವಾಗಿ ಪಡೆಯಲಿದ್ದಾರೆ. ಇದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ.**

ಇದರಿಂದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಓದುತ್ತಿರುವ ಸುಮಾರು 61 ಲಕ್ಷ ಮಕ್ಕಳಿಗೆ ಅನುಕೂಲವಾಗಲಿದೆ. ಈ ಮೂಲಕ ಮೊದಲ ಬಾರಿಗೆ 1ರಿಂದ 12ನೇ ತರಗತಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯ ಪುಸ್ತಕದ ಜೊತೆಗೆ ನೋಟ್‌ಬುಕ್ ಸಹ ವಿತರಣೆಗೆ ಮುಂದಾಗಿದೆ. ಕಾಲೇಜುಗಳ ವಿದ್ಯಾರ್ಥಿಗಳಿಗೂ ಉಚಿತ ಪಠ್ಯಪುಸ್ತಕಗಳನ್ನು ವಿತರಿಸಲು ನಿರ್ಧರಿಸಿದೆ. 2026–27ನೇ ಶೈಕ್ಷಣಿಕ ಸಾಲಿನಿಂದಲೇ ಈ ಹೊಸ ಯೋಜನೆ ಜಾರಿಗೆ ಬರಲಿದೆ. ಇದುವರೆಗೆ ಕೇವಲ 1 ರಿಂದ 10ನೇ ತರಗತಿಯವರೆಗಿನ ಸರ್ಕಾರಿ ಹಾಗೂ ಅನುದಾನಿತ ಶಾಲಾ ವಿದ್ಯಾರ್ಥಿಗಳಿಗೆ ಮಾತ್ರ ಉಚಿತ ಪಠ್ಯಪುಸ್ತಕ ವಿತರಣೆ ಯೋಜನೆಯನ್ನು ಸೀಮಿತಗೊಳಿಸಲಾಗಿತ್ತು.



ಇದೀಗ ಇತಿಹಾಸದಲ್ಲೇ ಮೊದಲ ಬಾರಿಗೆ ಈ ಸೌಲಭ್ಯವನ್ನು ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ. ರಾಜ್ಯಾದ್ಯಂತ ಇರುವ ಸರ್ಕಾರಿ ಪಿಯು ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳ ಲಕ್ಷಾಂತರ ವಿದ್ಯಾರ್ಥಿಗಳು ಈ ಯೋಜನೆಯ ಲಾಭ ಪಡೆಯಲಿದ್ದಾರೆ. ಈ ಮಹತ್ವದ ನಿರ್ಧಾರದಿಂದಾಗಿ ಗ್ರಾಮೀಣ ಭಾಗದ ಮತ್ತು ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಪಡೆಯಲು ಹೆಚ್ಚಿನ ಅನುಕೂಲವಾಗಲಿದ್ದು, ಆರ್ಥಿಕ ಹೊರೆ ಕಡಿಮೆಯಾಗಲಿದೆ ಎಂದು ಶಾಲಾ ಶಿಕ್ಷಣ ಇಲಾಖೆ ತಿಳಿಸಿದೆ.ಸರ್ಕಾರಿ ಕಾಲೇಜುಗಳಲ್ಲಿ ದಾಖಲಾತಿ ಹೆಚ್ಚಿಸಲು ಹಾಗೂ ಗುಣಮಟ್ಟದ ಶಿಕ್ಷಣ ನೀಡಲು ಶಾಲಾ ಶಿಕ್ಷಣ ಇಲಾಖೆ ಹಲವು ಕ್ರಮಗಳನ್ನು ಕೈಗೊಂಡಿದೆ.

ಪ್ರಸ್ತುತ ರಾಜ್ಯದಲ್ಲಿ 1,319 ಸರ್ಕಾರಿ, 815 ಅನುದಾನಿತ ಪದವಿಪೂರ್ವ ಕಾಲೇಜುಗಳು ಇವೆ. ಪ್ರಥಮ ಹಾಗೂ ದ್ವಿತೀಯ ವರ್ಷ ಸೇರಿ ಸರ್ಕಾರಿ ಕಾಲೇಜುಗಳಲ್ಲಿ 13.17 ಲಕ್ಷ ಹಾಗೂ ಅನುದಾನಿತ ಕಾಲೇಜುಗಳಲ್ಲಿ 1.91 ಲಕ್ಷ ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಕಲಾ, ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಒಟ್ಟು 34 ವಿಷಯಗಳನ್ನು ಬೋಧಿಸಲಾಗುತ್ತಿದೆ. ಪದವಿಪೂರ್ವ ಕಾಲೇಜುಗಳಿಗೆ 2026–27ನೇ ಸಾಲಿನಿಂದ ಉಚಿತ ಪಠ್ಯಪುಸ್ತಕ ವಿತ–ರಿಸುವ ಯೋಜನೆ ಅನುಷ್ಠಾನಕ್ಕೆ ತರಲಾಗಿದೆ.

ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ 1ರಿಂದ 10ನೇ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ, ಅಭ್ಯಾಸ ಪುಸ್ತಕ ಹಾಗೂ 1ರಿಂದ 12ನೇ ತರಗತಿಯವರೆಗೆ ದಿನಚರಿ ಪುಸ್ತಕ ವಿತರಣೆ ಸಂಬಂಧ ಶಿಕ್ಷಣ ಇಲಾಖೆಯು 30 ಕೋಟಿ 83 ಲಕ್ಷದ 25 ಸಾವಿರ ಹಣದ ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸಿತ್ತು. ಶಿಕ್ಷಣ ಇಲಾಖೆ ಸಲ್ಲಿಸಿದ್ದ ಪ್ರಸ್ತಾವನೆಗೆ ಸರ್ಕಾರ ಸಹ ಒಪ್ಪಿಗೆ ಸೂಚಿಸಿತ್ತು. ಇನ್ನು 1ರಿಂದ 12ನೇ ತರಗತಿ ವಿದ್ಯಾರ್ಥಿಗಳಿಗೆ ಸರ್ಕಾರದ ಕಡೆಯಿಂದಲೇ ಪಠ್ಯ ಪುಸ್ತಕ ಹಾಗೂ ನೋಟ್ ಬುಕ್ ಉಚಿತವಾಗಿ ನೀಡುವುದರಿಂದ ಪೋಷಕರ ಹೊರೆ ತಪ್ಪಲಿದೆ. 1ರಿಂದ 10ನೇ ತರಗತಿ ಮಕ್ಕಳಿಗೆ ಶಾಲೆಯಲ್ಲಿ ಪಠ್ಯ ಪುಸ್ತಕ ನೀಡಲಾಗುತ್ತಿತ್ತಾದರೂ ಪೋಷಕರು ನೋಟ್ ಬುಕ್ ಕೊಡಿಸಬೇಕಿತ್ತು. 11 ಮತ್ತು 12ನೇ ತರಗತಿ ವಿದ್ಯಾರ್ಥಿಗಳಿಗೂ ಸಹ ಪುಸ್ತಕ ನೀಡುತ್ತಿರುವುದ–ರಿಂದ ಪೋಷಕರ ಹೊರೆ ಕಡಿಮೆಯಾಗಲಿದೆ.

# ಕಾರಟಗಿ ಅಗ್ನಿಶಾಮಕ ಠಾಣೆಯಿಂದ ಏಪ್ರಿಲ್ 14 ರಿಂದ 20 ರವರೆಗೆ "ಅಗ್ನಿಶಾಮಕ ಸೇವಾ ಸಪ್ತಾಹ 2026"




❑ ನೈಜ್ಯ ದೆಸೆ ನ್ಯೂಸ್

**ಕಾರಟಗಿ: ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ವತಿಯಿಂದ, ಕಾರಟಗಿ ಅಗ್ನಿಶಾಮಕ ಠಾಣೆಯ ವ್ಯಾಪ್ತಿಯಲ್ಲಿ ಏಪ್ರಿಲ್ 14 ರಿಂದ ಏಪ್ರಿಲ್ 20, 2026 ರವರೆಗೆ *"ಅಗ್ನಿಶಾಮಕ ಸೇವಾ ಸಪ್ತಾಹ"*ವನ್ನು ಹಮ್ಮಿಕೊಳ್ಳಲಾಗಿದೆ.**

ಈ ವರ್ಷದ ಸಪ್ತಾಹವು "ಸುರಕ್ಷಿತ ಶಾಲೆ, ಸುರಕ್ಷಿತ ಆಸ್ಪತ್ರೆ ಮತ್ತು ಅಗ್ನಿ ಸುರಕ್ಷತೆಯ ಅರಿವುಳ್ಳ ಸಮಾಜ – ಅಗ್ನಿ ಮುನ್ನೆಚ್ಚರಿಕೆಗಾಗಿ ಒಂದಾಗಿ" (Safe School, Safe Hospital & Fire Safety Aware Society - Together for Fire Prevention) ಎಂಬ ಘೋಷವಾಕ್ಯದೊಂದಿಗೆ ನಡೆಯಲಿದೆ. ಸಾರ್ವಜನಿಕ ಸ್ಥಳಗಳು, ಶಾಲೆಗಳು ಮತ್ತು ಆಸ್ಪತ್ರೆಗಳಲ್ಲಿ ಬೆಂಕಿ ಅವಘಡಗಳನ್ನು ತಡೆಗಟ್ಟುವ ಬಗ್ಗೆ ಪ್ರಾತ್ಯಕ್ಷಿಕೆ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಬೇಸಿಗೆಯ ಕಾಲವಾಗಿರುವುದರಿಂದ ಬೆಂಕಿ ಅವಘಡಗಳು ಸಂಭವಿಸುವ ಸಾಧ್ಯತೆ ಹೆಚ್ಚಿರುತ್ತದೆ.

ಸಾರ್ವಜನಿಕರು ವಿದ್ಯುತ್ ಶಾರ್ಟ್ ಸರ್ಕ್ಯೂಟ್, ಗ್ಯಾಸ್ ಸೋರಿಕೆ ಹಾಗೂ ಕಸಕ್ಕೆ ಬೆಂಕಿ ಹಾಕುವ ವಿಷಯದಲ್ಲಿ ಜಾಗರೂಕರಾಗಿರಬೇಕು. ಯಾವುದೇ ತುರ್ತು ಸಂದರ್ಭದಲ್ಲಿ ತಕ್ಷಣವೇ ಠಾಣೆಯ ಕರೆ ಸಂಖ್ಯೆ 112/101 ಅಥವಾ ತುರ್ತು ಸಹಾಯವಾಣಿ ಸಂಖ್ಯೆಗೆ ಕರೆ ಮಾಡಬೇಕೆಂದು ಕೋರಲಾಗಿದೆ. ಬೆಂಕಿ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬ ನಾಗರಿಕರು ಅಗ್ನಿ ಸುರಕ್ಷತಾ ಕ್ರಮಗಳನ್ನು ಪಾಲಿಸುವ ಮೂಲಕ ಸಹಕ–ರಿಸಬೇಕು ಎಂದು ಕಾರಟಗಿ ಅಗ್ನಿಶಾಮಕ ಠಾಣಾಧಿಕಾರಿಗಳು ಹಾಗೂ ಸಿಬ್ಬಂದಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಮತ್ನಾಳ, ಜವಳಗೇರಾ ಹಾಗೂ ಗೊಬ್ಬರಕಲ್ ಗ್ರಾಮಗಳ ಹಲವು ಮುಖಂಡರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ರಾಮತ್ನಾಳ, ಜವಳಗೇರಾ ಹಾಗೂ ಗೊಬ್ಬರಕಲ್ ಗ್ರಾಮಗಳ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಜನಸ್ಪಂದನ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಅವರ ನೇತೃತ್ವದಲ್ಲಿ ಪಕ್ಷ ಸೇರ್ಪಡೆಗೊಂಡರು.**

ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಹೊಸ ಸದಸ್ಯರನ್ನು ಆತ್ಮೀಯವಾಗಿ ಸ್ವಾಗತಿಸಿ ಪಕ್ಷದ ಹೆಗಲುಪಟ್ಟಿ ಹಾಕುವ ಮೂಲಕ ಅಧಿಕೃತವಾಗಿ ಪಕ್ಷಕ್ಕೆ ಬರಮಾಡಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಬಸನಗೌಡ ಬಾದರ್ಲಿ ಅವರು, ಜನರ ವಿಶ್ವಾಸವೇ ಪಕ್ಷದ ನಿಜವಾದ ಶಕ್ತಿ ಎಂದು ತಿಳಿಸಿ, ಗ್ರಾಮ ಮಟ್ಟದಲ್ಲಿ



ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ನಾಯಕತ್ವ ಬೆಳೆಸುವ ಅಗತ್ಯವಿದೆ ಎಂದರು. ಗ್ರಾಮೀಣ ಅಭಿವೃದ್ಧಿ, ರೈತರ ಹಿತಾಸಕ್ತಿ, ಯುವಕರಿಗೆ ಉದ್ಯೋಗಾವಕಾಶಗಳು ಹಾಗೂ ಮೂಲಭೂತ ಸೌಲಭ್ಯಗಳ ಕಲ್ಪನೆಗೆ ಪಕ್ಷ ಬದ್ಧವಾಗಿದೆ ಎಂದು ಅವರು ಹೇಳಿದರು.

ಹೊಸದಾಗಿ ಸೇರ್ಪಡೆಗೊಂಡ ಕಾರ್ಯಕರ್ತರು ಪಕ್ಷದ ತತ್ವಗಳು ಮತ್ತು ಜನಪರ ಯೋಜನೆಗಳನ್ನು ಮನೆಮನೆಗೆ ತಲುಪಿಸುವ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಸೇರ್ಪಡೆಗೊಂಡ ಮುಖಂಡರು ಮಾತನಾಡಿ, ಜನಸೇವೆ ಮಾಡುವ ಉದ್ದೇಶದಿಂದ ಪಕ್ಷದ ಸಿದ್ಧಾಂತಗಳಿಗೆ ಬದ್ಧರಾಗಿ ಕೆಲಸ ಮಾಡುವುದಾಗಿ ಭರವಸೆ ನೀಡಿದರು.

ಮುಂದಿನ ದಿನಗಳಲ್ಲಿ ತಾಲೂಕಿನಲ್ಲಿ ಪಕ್ಷದ ಸಂಘಟನೆ ಇನ್ನಷ್ಟು ಬಲಗೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ತಾಲೂಕು ಹಾಗೂ ಗ್ರಾಮ ಮಟ್ಟದ ಮುಖಂಡರು, ಯುವ ಕಾರ್ಯಕರ್ತರು, ಮಹಿಳಾ ಘಟಕದ ಪದಾಧಿಕಾರಿಗಳು ಮತ್ತು ಅಪಾರ ಸಂಖ್ಯೆಯ ಅಭಿಮಾನಿಗಳು ಭಾಗವಹಿಸಿದ್ದರು.

# ಮಾನ್ವಿ ನಗರ ಕುಡಿಯುವ ನೀರಿನ ಜಲಸಂಗ್ರಹ ಗರಿಗೆ ಸಚಿವರು ಹಾಗೂ ಶಾಸಕರ ಭೇಟಿ ನೀರು ಪೋಲಾಗದಂತೆ ಕಟ್ಟುನಿಟ್ಟಿನ ಸೂಚನೆ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಬೇಸಿಗೆ ಹಿನ್ನೆಲೆಯಲ್ಲಿ ನಗರದಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಮುನ್ನೆಚ್ಚ–ರಿಕಾ ಕ್ರಮಗಳನ್ನು ಕೈಗೊಳ್ಳುವ ಉದ್ದೇಶದಿಂದ ಮಾನ್ವಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಾನ್ವಿ ನಗರದ ಕುಡಿಯುವ ನೀರಿನ ಜಲಸಂಗ್ರಹಕ್ಕೆ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ವಿಧಾನ ಪರಿಷತ್ತಿನ ಸಭಾ ನಾಯಕ ಎನ್.ಎಸ್. ಬೋಸರಾಜು ಮತ್ತು ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ. ಹಂಪಯ್ಯ ನಾಯಕ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.**

ಜಲಸಂಗ್ರಹ ಗರದ ಪರಿಸ್ಥಿತಿ ಹಾಗೂ ನೀರಿನ ಮಟ್ಟದ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಸಚಿವರು, ನಗರ ನಿವಾಸಿಗಳಿಗೆ ನಿರಂತರವಾಗಿ ಕುಡಿಯುವ ನೀರು ಪೂರೈಕೆ ಆಗುವಂತೆ ಯೋಜಿತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.



ಸಂಗ್ರಹವಾಗಿರುವ ನೀರು ಯಾವುದೇ ಕಾರಣ–ಕ್ಕೂ ವ್ಯರ್ಥವಾಗದಂತೆ ಸೂಕ್ತ ನಿರ್ವಹಣೆ ಮಾಡಬೇಕು ಹಾಗೂ ನೀರಿನ ಸಂಗ್ರಹ ಸಾಮರ್ಥ–್ಯವನ್ನು ಹೆಚ್ಚಿಸುವತ್ತ ಗಮನಹರಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಪುರಸಭೆಯ ಮುಖ್ಯಾಧಿಕಾರಿ ಪರಶುರಾಮ ದೇವಮಾನೇ ಅವರು ವಿವರ ನೀಡುತ್ತಾ, ಪ್ರಸ್ತುತ ಜಲಸಂಗ್ರಹ ಗರದಲ್ಲಿ 6.2 ಮೀಟ–ರ್ ಮಟ್ಟದ ನೀರು ಸಂಗ್ರಹವಾಗಿದ್ದು, ಸಂಪೂರ್ಣ ಭರ್ತಿಗೆ 9 ಮೀಟರ್ ಮಟ್ಟದವರೆಗೆ ನೀರು ಸಂಗ್ರಹಿಸಬೇಕಿದೆ ಎಂದು ತಿಳಿಸಿದರು.

ಈ ಹಿನ್ನೆಲೆಯಲ್ಲಿ ಅಗತ್ಯ ತಾಂತ್ರಿಕ



ಕ್ರಮಗಳನ್ನು ಕೈಗೊಂಡು ನೀರಿನ ಸಂಗ್ರಹವನ್ನು ಹೆಚ್ಚಿಸುವಂತೆ ಸಚಿವರು ಸೂಚಿಸಿದರು. ನಗರದಲ್ಲಿ ಮುಂಬರುವ ದಿನಗಳಲ್ಲಿ ನೀರಿನ ಬೇಡಿಕೆ ಹೆಚ್ಚಾಗುವ ಸಾಧ್ಯತೆ ಇರುವುದ–ರಿಂದ ನೀರು ಸರಬರಾಜು ವ್ಯವಸ್ಥೆಯನ್ನು ಬಲಪಡಿಸುವುದು, ಪೈಪ್‌ಲೈನ್ ದುರಸ್ತಿ ಕಾರ್ಯಗಳನ್ನು ವೇಗಗೊಳಿಸುವುದು ಹಾಗೂ ಸೋರಿಕೆ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು. ಸಾರ್ವಜನಿಕರು ನೀರನ್ನು ಮಿತವಾಗಿ ಬಳಸುವ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಅಗತ್ಯವಿದೆ ಎಂಬ ಅಭಿಪ್ರಾಯವನ್ನೂ ವ್ಯಕ್ತಪಡಿಸಿದರು.

ಶಾಸಕ ಜಿ. ಹಂಪಯ್ಯ ನಾಯಕ್ ಮಾತನಾಡಿ, ಮಾನ್ವಿ ನಗರದ ಜನತೆಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ. ಅಧಿಕಾ–ರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ನೀರು ಸರಬರಾಜು ವ್ಯವಸ್ಥೆಯನ್ನು ಸುಧಾರಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಮಾಜಿ ನಗರಸಭಾ ಸದಸ್ಯ ರುದ್ರಪ್ಪ ಅಂಗಡಿ, ಸೈಯದ್ ಖಾಲಿದ್ ಖಾದ್ರಿ, ನರಸಪ್ಪ ರಬ್ಬಣಕಲ್, ಸತ್ತಾರ್ ಬಂಗ್ಲೆವಲೇ, ಕನಕಪ್ಪ ಯಾದವ್ ಸೇರಿದಂತೆ ಪುರಸಭೆಯ ಸಿಬ್ಬಂದಿ ವರ್ಗ, ಸ್ಥಳೀಯ ಮುಖಂಡರು

## ಸಾಹಿತ್ಯ ಸಿಂಚನ

ಕರ್ಮ

ಕರ್ಮವೇ ಜೀವನದ ದಾರಿ,
ಮನುಜನ ನಡೆಗೆ ಅದೇ ಸಾಕ್ಷಿ.
ಬಿತ್ತಿದ ಬೀಜವೇ ಬೆಳೆವಾಗುತ್ತದೆ,
ಮಾಡಿದ ಕೆಲಸವೇ ಫಲ ಕೊಡುತ್ತದೆ.

ಒಳ್ಳೆಯ ಮನದ ಒಂದು ಕೆಲಸ,
ನೂರಾರು ಹೃದಯಗಳಲ್ಲಿ ಬೆಳಕು.
ಕೆಟ್ಟ ಕರ್ಮದ ನೆರಳು ಬಂದರೆ,
ಶಾಂತಿಯ ಹಾದಿ ದೂರವಾಗುತ್ತದೆ.

ಕೈಯಲ್ಲಿ ಇರುವದು ಕರ್ಮ ಮಾತ್ರ,
ಫಲದ ಮೇಲೆ ನಮಗಿಲ್ಲ ಅಧಿಕಾರ.
ನಿಸ್ವಾರ್ಥವಾಗಿ ನಡೆದು ಹೋದರೆ,
ಜೀವನವೇ ಆಗುತ್ತದೆ ಸುಂದರ ಸಾರ.

ನಮ್ಮ ಮಾತು, ನಮ್ಮ ನಡೆ,
ನಾಳೆಯ ಭಾಗ್ಯವನ್ನು ಬರೆಯುವ ಅಕ್ಷರ.
ಒಳ್ಳೆಯ ಕರ್ಮದ ಬೆಳಕಿನಲ್ಲಿ,
ಮಾನವ ಜೀವನವೇ ಆಗಲಿ ಅಮರ.

**ರವಿಕುಮಾರ್**

# ಶಿಕ್ಷಕರು ಉತ್ತಮ ಸಮಾಜದ ನಿರ್ಮಾಪಕರು: ಸಾಹಿತಿ ಪತ್ತಾರ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿಯ: ಒಂದು ಆರೋಗ್ಯಪೂರ್ಣ ಸಮಾಜದ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಅಪಾರವಾಗಿದೆ ಅವರ ಮೇಲೆ ದೊಡ್ಡ ಜವಾಬ್ದಾರಿ ಇದೆ ಅವರು ತಮ್ಮನ್ನು ಜ್ಞಾನದಿಂದ ಗುರುತಿಸಿಕೊಳ್ಳುವವರಾಗಬೇಕು ಎಂದು ಜೆ ಎಸ್ ಜೆ ಪದವಿಪೂರ್ವ ಕಾಲೇಜ್ ಕಾರ್ಯದರ್ಶಿ, ಸಾಹಿತಿ ಶ್ರೀಕಾಂತ ಪತ್ತಾರ ಹೇಳಿದರು.ಪಟ್ಟಣದ ಆಶ್ರಯ ಬಡಾವಣೆಯಲ್ಲಿ ಎಸ್‌ಕೆ ಶಿಕ್ಷಣ ಮಹಾವಿದ್ಯಾಲಯದಿಂದ ಆಯೋಜಿಸಿದ ಏಳು ದಿನಗಳ ಎನ್‌ಎಸ್‌ಎಸ್ ವಿಶೇಷ ಶಿರದಲ್ಲಿ "ಪ್ರಸ್ತುತ ಸಮಾಜದಲ್ಲಿ ಶಿಕ್ಷಕರ ಪಾತ್ರ" ಎಂಬ ವಿಷಯದ ಮೇಲೆ ಅವರು ಶನಿವಾರ ಮಾತನಾಡಿದರು.**

ಈ ವಿಶೇಷ ಶಿಬಿರದ ಅಂಗವಾಗಿ ಮುಂಜಾನೆ ಎನ್.ಎಸ್.ಎಸ್ ಗೀತೆಯ ಗಾಯನ ಹಾಗೂ ಯೋಗಾಭ್ಯಾಸ ನಡೆಸಲಾಯಿತು. ಬಳಿಕ ವಿದ್ಯಾರ್ಥಿಗಳು ನಗರದ ಆಶ್ರಯ ಕಾಲೋನಿ ಸಾರ್ವಜನಿಕ ಸ್ಥಳಗಳನ್ನು



ಸ್ವಚ್ಛಗೊಳಿಸುವ ಮೂಲಕ ಶ್ರಮದಾನದಲ್ಲಿ ತೊಡಗಿಸಿಕೊಂಡರು. ವಿವಿ ಸಂಘದ ನಿರ್ದೇಶಕ ಮಾತನಾಡಿ ಶಿಕ್ಷಕರಾದವರು ಉತ್ತಮ ತಯಾರಿಯೊಂದಿಗೆ ಪಾಠಗಳಲ್ಲಿ ಮುಂದುವರೆಯಬೇಕು ಎಂದು ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದ ಮಾರ್ಗದರ್ಶಕರಾದ ನವೀನ್ ಅವರು, ಶಿಕ್ಷಕ ವಿದ್ಯಾರ್ಥಿಗಳ ನಡುವೆ ಉತ್ತಮ ಗೌರವಿರಬೇಕು. ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಉಪನ್ಯಾಸಕರಾದ ಯು.ಎನ್.ಮಂಗೊಂಡ ಅವರು ಮಾತನಾಡಿ, ಶಿಕ್ಷಕರು ಹಣಕ್ಕಾಗಿ ದುಡಿಯದೆ ಮಕ್ಕಳ ಹಿತಕ್ಕಾಗಿ ದುಡಿಯವರಾಗಿದ್ದು ಅವರು ನಿಸ್ವಾರ್ಥ ಸಮಾಜ ಸೇವಕರಾಗಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಎ.ಐ. ಜಾಲವಾದಿ ಚೇರ್ಮನ್ನರು ಎಸ್. ಕೆ ಉಚಿತ ಪ್ರಸಾದ ನಿಲಯ ತಾಳಿಕೋಟಿ, ಎಸ್. ಎಸ್. ಸರೂರ ನಿರ್ದೇಶಕರು ವೀ.ವಿ ಸಂಘ ತಾಳಿಕೋಟಿ ಉಪಸ್ಥಿತರಿದ್ದರು. ಪ್ರಶಿಕ್ಷಣಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಕೂಡ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಪಾರ್ವತಿ ಮತ್ತು ತಂಡ ಪ್ರಾರ್ಥನೆ ನೆರವೇರಿಸಿದರು. ಮಲ್ಲಿಕಾ ಹಾಗೂ ತಂಡ ಎನ್.ಎಸ್.ಎಸ್ ಗೀತೆಯನ್ನು ಹಾಡಿದರು. ಮಹಾಲಿಂಗ ಸ್ವಾಗತಿಸಿ ಪರಿಚಯಿಸಿದರು. ಉಮಾಶ್ರೀ ಪುಷ್ಪಾರ್ಪಣೆ ನೆರವೇರಿಸಿದರು. ಸಿದ್ದಪ್ಪ ಮುರಾಳ ವಂದನಾರ್ಪಣೆ ಸಲ್ಲಿಸಿದರು. ದೀಪಿಕಾ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಾಧಿಕಾರಿಗಳಾದ ಎ.ಎ. ಗಂಗನಗೌಡರ, ಕಾರ್ಯದರ್ಶಿಗಳಾದ ರೇಷ್ಮಾ ಚಲವಾದಿ, ಒಕ್ಕೂಟ ಪ್ರತಿನಿಧಿ ಶಿವರಾಜ ಹಾಗೂ ಪಾರ್ವತಿ ಹಾಗೂ ಎನ್.ಎಸ್.ಎಸ್ ಶಿಬಿರಾರ್ಥಿಗಳು ಮತ್ತು ಮಹಾವಿದ್ಯಾಲಯದ

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿಗೆ ಅಂಕಗಳ ಬದಲು ಗ್ರೇಡ್ ನೀಡುವ ಕುರಿತು ಕರಡು ಅಧಿಸೂಚನೆ ಪ್ರಕಟ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆ ಮುಖ್ಯವಾಗಿ ಹಿಂದಿ ವಿಷಯಕ್ಕೆ ಅಂಕಗಳ ಬದಲು ಗ್ರೇಡ್ ನೀಡುವ ನಿರ್ಧಾರ ಕುರಿತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ತನ್ನ ಅಧಿಕೃತ ವೆಬ್‌ಸೈಟ್‌ನಲ್ಲಿ ಕರಡು ಅಧಿಸೂಚನೆ ಪ್ರಕಟಿಸಿದೆ. ಈ ಕುರಿತು ಸಾರ್ವಜನಿಕರಿಂದ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಏಳು ದಿನಗಳೊಳಗೆ ಆಹ್ವಾನಿಸಲಾಗಿದೆ. ಈಗಾಗಲೇ ಎಸ್‌ಎಸ್‌ಎಲ್‌ಸಿ ಉತ್ತರಪತ್ರಿಕೆಗಳ ಮೌಲ್ಯಮಾಪನ ಪ್ರಾರಂಭವಾಗಿದ್ದು,**



**ಫಲಿತಾಂಶವನ್ನು ಏ.24 ರಂದು ಪ್ರಕಟಿಸುವ ಸಾಧ್ಯತೆ ಇದೆ.**

ಕರಡು ಅಧಿಸೂಚನೆಯ ಪ್ರಕಾರ, ತೃತೀಯ ಭಾಷೆ ಹಾಗೂ ಎನ್‌ಎಸ್‌ಕ್ಯೂಎಫ್ (ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟು) ವಿಷಯಗಳಲ್ಲಿ ವಿದ್ಯಾರ್ಥಿಗಳು ಪಡೆದ ಅಂಕಗಳ ಆಧಾರದಲ್ಲಿ ಎ, ಬಿ ಮತ್ತು ಸಿ ಗ್ರೇಡ್‌ಗಳನ್ನು ನೀಡಲಾಗುತ್ತದೆ. ಈ ಗ್ರೇಡ್‌ಗಳು ವಿದ್ಯಾರ್ಥಿಗಳ ಪಾಸ್ ಅಥವಾ ಫೇಲ್ ಬಗ್ಗೆ ಯಾವುದೇ ಸೂಚನೆ ನೀಡುವುದಿಲ್ಲ. ಅಂದರೆ, ಎ ಗ್ರೇಡ್ ಪಡೆದ ವಿದ್ಯಾರ್ಥಿಯೂ ಫೇಲ್ ಆಗುವುದಿಲ್ಲ. ಇದು ಕೇವಲ ಕಾರ್ಯಕ್ಷಮತೆಯ ಹಂತವನ್ನು ಸೂಚಿಸುತ್ತದೆ. ಒಟ್ಟು ಅಂಕಗಳಲ್ಲಿ ಬದಲಾವಣೆ: ಈ ಹಿಂದೆ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು, ತೃತೀಯ ಭಾಷೆಗೆ ಅಂಕಗಳ ಬದಲು ಗ್ರೇಡ್ ನೀಡುವುದರಿಂದ ಒಟ್ಟು ಅಂಕಗಳನ್ನು 625 ರಿಂದ 525 ಕ್ಕೆ ಪರಿಗಣಿಸಲು ನಿರ್ಧರಿಸಿರುವುದಾಗಿ ಘೋಷಿಸಿದ್ದರು. ಅಂದರೆ, ಹಿಂದಿ ವಿಷಯದ 100 ಅಂಕಗಳನ್ನು ಒಟ್ಟು ಮೆರಿಟ್‌ನಿಂದ ಹೊರಗಿಡಲಾಗುತ್ತದೆ. ಹೈಕೋರ್ಟ್‌ನ ತೀರ್ಪು: ಪಿಐಎಲ್ ವಜಾ, 1 ಲಕ್ಷ ದಂಡ: ಈ ಗ್ರೇಡ್ ನಿರ್ಧಾರ ಪ್ರಶ್ನಿಸಿ ಹೆಚ್.ಎನ್. ಚಂದನಾ ಮತ್ತು ಎಸ್.ವೆಂಕಟೇಶ್ ಎಂಬವರು ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ (ಪಿಐಎಲ್) ಸಲ್ಲಿಸಿದ್ದರು. ಪರೀಕ್ಷೆಯ ಕೊನೆಯ ಹಂತದಲ್ಲಿ ಸರ್ಕಾರ ತೆಗೆದುಕೊಂಡಿರುವ ಈ ನಿರ್ಧಾರ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಪರಿಣಾಮ ಬೀರಲಿದೆ ಎಂದು ಅವರು ಆರೋಪಿಸಿದ್ದರು. ಆದರೆ ಅರ್ಜಿದಾರರು ಸರ್ಕಾರದ ಆದೇಶದ ನಕಲು ಅಥವಾ ಅಧಿಕೃತ ದಾಖಲೆ ಒದಗಿಸದೆ, ಕೇವಲ ಪತ್ರಿಕೆಗಳ ವರದಿ ಆಧರಿಸಿ ಅರ್ಜಿ ಸಲ್ಲಿಸಿದ್ದರು. ಹೈಕೋರ್ಟ್ ಈ ನಿಲುವನ್ನು ತೀವ್ರವಾಗಿ ಖಂಡಿಸಿ, ಅರ್ಜಿಯನ್ನು ವಜಾಗೊಳಿಸಿತು ಮತ್ತು ಅರ್ಜಿದಾರರಿಗೆ 1,00,000 (ಒಂದು ಲಕ್ಷ) ರೂಪಾಯಿ ದಂಡ ವಿಧಿಸಿತು. ದಂಡವನ್ನು ರಾಜ್ಯ ಕಾನೂನು ಸೇವಾ ಪ್ರಾಧಿಕಾರಕ್ಕೆ ಪಾವತಿಸುವಂತೆ ಸೂಚಿಸಲಾಯಿತು. ಕರಡು ಅಧಿಸೂಚನೆ ಕುರಿತು ಯಾರಾದರೂ ಆಕ್ಷೇಪಣೆ ಅಥವಾ ಸಲಹೆ ಹೊಂದಿದ್ದಲ್ಲಿ, ಏಳು ದಿನಗಳೊಳಗಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಿಗೆ ಸಲ್ಲಿಸಬಹುದು.ಅಂತಿಮ ನಿರ್ಧಾರವನ್ನು ಸಾರ್ವಜನಿಕರ ಪ್ರತಿಕ್ರಿಯೆ ನಂತರ ಕೈಗೊಳ್ಳಲಾಗುವುದು.

# ಬಡತನದಲ್ಲಿ ಅರಳಿದ ರೈತನ ಮಗಳ ಪ್ರತಿಭೆಗೆ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಹಾಗೂ ವಾಲ್ಮೀಕಿ ಸಮುದಾಯದ ವತಿಯಿಂದ ಸನ್ಮಾನ



ನೈಜ್ಯ ದೆಸೆ ನ್ಯೂಸ್

**ಮಾನ್ವಿ: ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕಲಾ ವಿಭಾಗದಲ್ಲಿ 593 (98.83%)ಅಂಕಗಳನ್ನು ತೆಗೆದು ಕೊಂಡು ಅಮೋಘ ಸಾಧನೆ ಮಾಡಿದ ದುರ್ಗಾಭವಾನಿ, ರಾಯಚೂರು ಜಿಲ್ಲೆಗೆ ಪ್ರಥ-ಮ ಸ್ಥಾನ ಪಡೆದು ಕೀರ್ತಿ ತಂದಿದ್ದಾಳೆ. ಅಲ್ಲದೆ ಹೈದರಾಬಾದ್ ಕರ್ನಾಟಕ ಪ್ರದೇಶದಲ್ಲಿ ದ್ವಿತೀಯ ರ್ಯಾಂಕ್ ಮತ್ತು ರಾಜ್ಯ ಮಟ್ಟದಲ್ಲಿ ನಾಲ್ಕನೇ ಸ್ಥಾನ ಗಳಿಸಿ ಗಮನ ಸೆಳೆದಿದ್ದಾಳೆ.**

ಬಡತನದಲ್ಲಿ ಅರಳಿದ ಪ್ರತಿಭೆ ಅಮರಾವತಿ ಗ್ರಾಮದ ಬಸವರಾಜ ಅವರ ಮಗಳಾದ ದುರ್ಗಾಭವಾನಿ ಅವರ ಈ ಸಾಧನೆಗೆ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಮೆಚ್ಚುಗೆ ವ್ಯಕ್ತವಾಗಿದ್ದು, ಪ್ರತಿಭೆಗೆ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಜಿಲ್ಲಾಧ್ಯಕ್ಷರಾದ ರಾಮಣ್ಣ ನಾಯಕ ತಾಲೂಕ ಪ್ರಧಾನ ಕಾರ್ಯದರ್ಶಿ ಕೊಂಡಯ್ಯ ನಾಯಕ, ಮಾಜಿ ಯೋಧರಾದ ಜೆಲ್ಲಿ ಅಂಜಿನೆಯ್ಯ ನಾಯಕ ಹಾಗೂ ವಾಲ್ಮೀಕಿ ಸಮಾಜದ ಮುಖಂಡರು ಸನ್ಮಾನಿಸಿ ಅಭಿನಂದಿಸಿದರು.

ವಿದ್ಯಾರ್ಥಿನಿಯ ಶ್ರಮ, ಕುಟುಂಬದ ಬೆಂಬಲ ಹಾಗೂ ಉಪನ್ಯಾಸಕರ ಮಾರ್ಗದರ್ಶನವೇ ಈ ಸಾಧನೆಗೆ ಕಾರಣವೆಂದು ದುರ್ಗಾಭವಾನಿ ತಿಳಿಸಿದ್ದಾಳೆ.ಈ ಸಂದರ್ಭದಲ್ಲಿ ಶಿವಶಂಕ್ರಯ್ಯ ಸ್ವಾಮಿ, ಶಂಕರಪ್ಪ ನಕ್ಕುಂದಿ,ಶರಣಪ್ಪ ನಂದಿಹಾಳ ಆಂಜನೇಯ ನಾಯಕ ನಸಲಾಪುರ, ಜಿ.ನರಸಿಂಹ ನಾಯಕ ಕರಡಿಗುಡ್ಡ, ರಾಘವೇಂದ್ರ ನಾಯಕ ಕಪಗಲ್,ಶಿವಕುಮಾರ ನಾಯಕ, ಭೀಮಯ್ಯ ನಾಯಕ, ಹುಲಿರಾಜ್ ನಾಯಕ ಉಪಸ್ಥಿತರಿದ್ದರು.

# ಇಳಕಲ್ ನಗರದ ವಿಸಿ ಅಕ್ಕಿ ಸ್ಮಾರಕ ಸಂಘದ ಆಡಳಿತಾಧಿಕಾರಿಗಳಾದ ರಾಜಮಹಮ್ಮದ್ ಇಲಕಲ್ ಅವರ ನಿವಾಸಕ್ಕೆ ಗವಿಮಠದ ಶ್ರೀಗಳು ಭೇಟಿ ನೀಡಿ ಭಾವೈಕ್ಯತೆ ಸಂದೇಶ ಸಾರಿದರು

ನೈಜ್ಯ ದೆಸೆ ನ್ಯೂಸ್

**ಇಳಕಲ್: ನಗರದ ವಿಸಿ ಅಕ್ಕಿ ಸ್ಮಾರಕ ಸಂಘದ ಆಡಳಿತಾಧಿಕಾರಿಗಳಾದ ರಾಜಮಹಮ್ಮದ್ ಇಲಕಲ್ ಅವರ ನಿವಾಸಕ್ಕೆ ಗವಿಮಠದ ಪೂಜ್ಯ ಶ್ರೀಗಳು ಗೌರವ ಭೇಟಿ ನೀಡಿದರು. ಶ್ರೀಗಳನ್ನು ಆತ್ಮೀಯವಾಗಿ ಸ್ವಾಗತಿಸಿದ ರಾಜಮಹಮ್ಮದ್ ಇಲಕಲ್ ಹಾಗೂ ಕುಟುಂಬಸ್ಥರು ಪುಷ್ಪಗುಚ್ಛ ನೀಡಿ ಸತ್ಕರಿಸಿದರು.**

ಈ ಸಂದರ್ಭದಲ್ಲಿ ಶ್ರೀಗಳು



ಮಾತನಾಡಿ, ಸಮಾಜದಲ್ಲಿ ಶಾಂತಿ, ಸಹೋದರತ್ವ ಹಾಗೂ ಭಾವೈಕ್ಯತೆ ಅತ್ಯಂತ ಮುಖ್ಯವಾಗಿದ್ದು ಎಲ್ಲ ಧರ್ಮ, ಜಾತಿ, ಭಾಷೆಗಳ ಜನರು ಪರಸ್ಪರ ಗೌರವದಿಂದ ಬದುಕಿದಾಗ ಮಾತ್ರ ಸಮಾಜ ಅಭಿವೃದ್ಧಿಯಾಗುತ್ತದೆ ಎಂದು ತಿಳಿಸಿದರು. ಮಾನವೀಯ ಮೌಲ್ಯಗಳು ಮತ್ತು ಪರಸ್ಪರ ಸಹಕಾರವೇ ನಿಜವಾದ ಧರ್ಮ ಎಂದು ಅವರು ಹೇಳಿದರು.


ಭೇಟಿಯ ವೇಳೆ ವಿವಿಧ ಧರ್ಮಗಳ ಮುಖಂಡರು, ಸಂಘದ ಪದಾಧಿಕಾರಿಗಳು, ಸ್ಥಳೀಯ ಗಣ್ಯರು ಹಾಗೂ ಭಕ್ತರು ಉಪಸ್ಥಿತರಿದ್ದು, ಧಾರ್ಮಿಕ ಸೌಹಾರ್ದತೆಗೆ ಇದು ಉತ್ತಮ ಉದಾಹರಣೆ ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ಶ್ರೀಗಳಿಗೆ ಸ್ಮರಣಿಕೆ ನೀಡಿ ಗೌರವಿಸಲಾಯಿತು. ನಗರದಲ್ಲಿ ಭಾವೈಕ್ಯತೆ ಮತ್ತು ಸಾಮರಸ್ಯವನ್ನು ಬಲಪಡಿಸುವ ಉದ್ದೇಶದಿಂದ ನಡೆದ ಈ ಭೇಟಿ ಸಾರ್ವಜನಿಕರಲ್ಲಿ ಸಂತೋಷ ಮತ್ತು ಮೆಚ್ಚುಗೆಗೆ ಪಾತ್ರವಾಯಿತು.

# ಡಿಎ ನೀಡುವಲ್ಲಿ ತಾರತಮ್ಯ ಮಾಡುವಂತಿಲ್ಲ: ನೌಕರರು ಮತ್ತು ಪೆನ್ಷನರ್‌ಗಳಿಗೆ ಸುಪ್ರೀಂ ಕೋರ್ಟ್‌ನಿಂದ ಬಿಗ್ ರಿಲೀಫ್!

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ತುಟ್ಟಿಭತ್ಯೆ (DA) ಮತ್ತು ತುಟ್ಟಿ ಪರಿಹಾರ (DR) ಹೆಚ್ಚಳ ಮಾಡುವಾಗ ಹಾಲಿ ನೌಕರರು ಮತ್ತು ನಿವೃತ್ತ ನೌಕರರ (Pensioners) ನಡುವೆ ಸರ್ಕಾರ ತಾರತಮ್ಯ ಮಾಡುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ಇಂದು (ಏಪ್ರಿಲ್ 10, 2026) ಐತಿಹಾಸಿಕ ತೀರ್ಪು ನೀಡಿದೆ. "ಬೆಲೆ ಏರಿಕೆಯ ಹೊಡೆತವು ನೌಕರರಿಗೆ ಮತ್ತು ನಿವೃತ್ತ ನೌಕರರಿಗೆ ಸಮಾನವಾಗಿಯೇ ಇರುತ್ತದೆ" ಎಂದು ನ್ಯಾಯಾಲಯ ಈ ವೇಳೆ ಅಭಿಪ್ರಾಯಪಟ್ಟಿದೆ.**

ಸಂವಿಧಾನದ 14ನೇ ವಿಧಿಯಡಿ (ಸಮಾನತೆಯ ಹಕ್ಕು) ಎಲ್ಲರಿಗೂ ಸಮಾನ ರಕ್ಷಣೆ ಇರಬೇಕು. ನೌಕರರಿಗೆ ಹೆಚ್ಚಿನ ದರದಲ್ಲಿ ಡಿಎ ನೀಡಿ, ಪೆನ್ಷನರ್‌ಗಳಿಗೆ ಕಡಿಮೆ ದರದಲ್ಲಿ ತುಟ್ಟಿ ಪರಿಹಾರ ನೀಡುವುದು ಕಾನೂನುಬಾಹಿರ ಮತ್ತು ಸ್ವೇಚ್ಛಾಚಾರದ ನಡವಳಿಕೆ ಎಂದು ಕೋರ್ಟ್ ಹೇಳಿದೆ. ನೌಕರರಿಗೆ 14% ಮತ್ತು ಪೆನ್ಷನರ್‌ಗಳಿಗೆ ಕೇವಲ 11%



ಡಿಎ ಘೋಷಿಸಿದ್ದ ಕೇರಳ ಸರ್ಕಾರ ಮತ್ತು ಕೆ-ಎಸ್‌ಆರ್‌ಟಿಸಿ (KSRTC) ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಮನೋಜ್ ಮಿಶ್ರಾ ಮತ್ತು ಪ್ರಸನ್ನ ಬಿ. ವರಾಳೆ ಅವರಿದ್ದ ಪೀಠ ವಜಾಗೊಳಿಸಿದೆ.

"ಸರ್ಕಾರದ ಬಳಿ ಹಣವಿಲ್ಲ ಎಂಬ ಕಾರಣಕ್ಕೆ ನಿವೃತ್ತ ನೌಕರರ ಹಕ್ಕನ್ನು ಕಸಿದುಕೊಳ್ಳಲು ಸಾಧ್ಯವಿಲ್ಲ. ತುಟ್ಟಿಭತ್ಯೆ ಎನ್ನುವುದು ಸರ್ಕಾರ ನೀಡುವ ಭಿಕ್ಷೆಯಲ್ಲ, ಬದಲಾಗಿ ಅದು ಬೆಲೆ ಏರಿಕೆಯನ್ನು ತಡೆದುಕೊಳ್ಳಲು ಇರುವ ಶಾಸನಬದ್ಧ ಹಕ್ಕು" ಎಂದು ನ್ಯಾಯಾಲಯ ಖಡಕ್ ಆಗಿ ತಿಳಿಸಿದೆ. ಇನ್ನು ಮುಂದೆ ಕೇಂದ್ರ ಅಥವಾ ರಾಜ್ಯ ಸರ್ಕಾರಗಳು ತುಟ್ಟಿಭತ್ಯೆ ಹೆಚ್ಚಳ ಮಾಡುವಾಗ ಎರಡು ವರ್ಗದವರಿಗೂ ಒಂದೇ ದರವನ್ನು ಅನ್ವಯಿಸಬೇಕು ಎಂದು ನ್ಯಾಯಾಲಯ ಆದೇಶಿಸಿದೆ.

ಕೇರಳ ಸರ್ಕಾರವು 2021ರಲ್ಲಿ ತನ್ನ ನೌಕರರಿಗೆ ನೀಡಿದ ಡಿಎಗಿಂತ ಪೆನ್ಷನರ್‌ಗಳಿಗೆ ಕಡಿಮೆ ಪ್ರಮಾಣದ ತುಟ್ಟಿ ಪರಿಹಾರ ನೀಡಿ ಆದೇಶ ಹೊರಡಿಸಿತ್ತು. ಇದನ್ನು ಪ್ರಶ್ನಿಸಿ ನಿವೃತ್ತ ನೌಕರರು ಹೈಕೋರ್ಟ್ ಮೆಟ್ಟಿಲೇರಿದ್ದರು. ಕೇರಳ ಹೈಕೋರ್ಟ್ ಸರ್ಕಾರದ ಆದೇಶವನ್ನು ರದ್ದುಗೊಳಿಸಿತ್ತು. ಇದನ್ನು ವಿರೋಧಿಸಿ ಕೇರಳ ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿತ್ತು. ಈಗ ಸುಪ್ರೀಂ ಕೋರ್ಟ್ ಕೂಡ ನಿವೃತ್ತ ನೌಕರರ ಪರವಾಗಿಯೇ ತೀರ್ಪು ನೀಡಿದೆ.

# ಮನುಕುಲದ ಮಾನವೀಯತೆಯ ಪಾಠಶಾಲೆಯೇ ನಮ್ಮ ಕಾರುಣ್ಯಾಶ್ರಮ :ಖಾಜಾ ಹುಸೇನ್

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಜನತಾ ಕಾಲೋನಿಯ ರ-ಜಿಯಾ ಬೇಗಂ ಮೈಬೂಬ್ ಸಾಬ್ ಈ ದಂಪತಿಗಳ ಮಗಳಾದ ಹೈಫಾ ಮೊಹಮ್ಮದಿ ಅವರ ಪ್ರಥ-ಮ ವರ್ಷದ ಜನ್ಮ ಸಾರ್ಥಕ ದಿನದ ಅಂಗವಾಗಿ ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಮಹಾಪ್ರಸಾದ ಸೇವೆ ಸಲ್ಲಿಸಿ ಹಾಗೂ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಸರಳವಾಗಿ ಆಚರಿಸಿದರು. ಈ ಕಾರ್ಯಕ್ರಮದಲ್ಲಿ ಆಶ್ರಮದ ವತಿಯಿಂದ ಮೈಬೂಬ್ ಸಾಬ್ ಅವರ ಕುಟುಂಬವನ್ನು ಗೌರವಿಸಿ ಆಶೀರ್ವದಿಸಲಾಯಿತು.**

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದ ಪತ್ರಕರ್ತರಾದ ಖಾಜಾ ಹುಸೇನ್ ಬನ್ನಿಗನೂರು ಮಾತನಾಡಿ ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ ಆಶಯದಂತೆ ಕಾರುಣ್ಯ ಆಶ್ರಮದ ಸೇವೆ ಜರುಗುತ್ತಿದೆ. ಮನುಕುಲದ ಮಾನವೀಯತೆಯ ಪಾಠಶಾಲೆಯೇ ನಮ್ಮ





ಕಾರುಣ್ಯಾಮವಾಗಿದೆ. ಮನುಷ್ಯನಲ್ಲಿರುವ ಅಹಂಕಾರ ಗರ್ವ ಮತ್ಸರ ಗುಣಗಳು ಅಳಿಯಬೇಕಾದರೆ ಒಮ್ಮೆ ಕಾರುಣ್ಯ ಕುಟುಂಬಕ್ಕೆ ಭೇಟಿ ಕೊಡಿ. ಮನುಷ್ಯನ ಹುಟ್ಟು ಸಾವಿನ ಮಧ್ಯೆ ಬದುಕಿನ ಪಾಠಶಾಲೆಯಾಗಿ ನಮ್ಮ ಸಿಂಧನೂರಿನ ಕಾರುಣ್ಯ ಕುಟುಂಬ ನಮ್ಮ ರಾಜ್ಯವಲ್ಲದೆ ದೇಶಕ್ಕೆ ಕರುಣೆಯ ಕುಟುಂಬವಾಗಿರುವುದು ಸಮಸ್ತ ಸಿಂಧನೂರಿನ ಜನತೆಯ ಗೌರವಕ್ಕೆ ಕಾರಣವಾಗಿದೆ.

ಇಂತಹ ಸತ್ಯ ಪ್ರಾಮಾಣಿಕ ಸೇವೆ ಮಾಡುವ ಕಾರುಣ್ಯಾಶ್ರಮಕ್ಕೆ ಸ್ವಂತ ಜಾಗ ಕಲ್ಪಿಸುವಲ್ಲಿ ನಾವೆಲ್ಲರೂ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ. ಹರೇಟನೂರು ಗ್ರಾಮದ ಬಡಜಂಗಮ ಕುಟುಂಬ ನಿಸ್ವಾರ್ಥತೆಯ ಸಂಸ್ಥೆಯನ್ನು ಹುಟ್ಟುಹಾಕಿ ಅದೆಷ್ಟೋ ಅಂದ ಅನಾಥರ ಬಾಳಿಗೆ ಬೆಳಕಾಗಿರುವುದು ಪ್ರವಾದಿಯವರ ಆಶಯದಂತೆ ಸಮಾಜಕ್ಕೆ ಮಾದರಿಯಾಗಿದೆ. ಸಹಾಯ ಮಾಡುವವರು ಸಹಾಯ ಮಾಡಿ ಹೋಗುತ್ತಾರೆ. ಆದರೆ ನಿತ್ಯ ನಿರಂತರ ಇಂತಹ ನೊಂದ ವೃದ್ಧರ ಹಾಗೂ ವಯಸ್ಕರ ಬುದ್ಧಿಮಾಂದ್ಯರ ಜೊತೆಗೆ ನಿಲ್ಲುವುದು ಸರಳ ಸಾಮಾನ್ಯ ಕಾರ್ಯವಲ್ಲ ಇವೆಲ್ಲವುಗಳ ಮಧ್ಯೆಯೂ ಸಹ ಸಮಾಜದಲ್ಲಿನ ಟೀಕೆ ಟಿಪ್ಪಣಿ ಅವಮಾನ ಅಪಪ್ರಚಾರ ಸೂಕ್ತ ಉತ್ತರ ನೀಡುವುದು ಮತ್ತು ಸಂಸ್ಥೆಯ ನಿರ್ವಹಣೆ ಮಾಡುವುದು ಸುಲಭದ ಮಾತಲ್ಲ ಪ್ರವಾದಿ ಭಗವಂತನ ಆಶೀರ್ವಾದ ಕಾರುಣ್ಯ ಕುಟುಂಬಕ್ಕಿರುವುದರಿಂದ ಇಂತಹ ಕೇಳರಿಯದ ಕಂಡರಿಯದ ಕಾರುಣ್ಯ ಕುಟುಂಬದ ಸೇವೆ ಸಿಂಧನೂರಿನಲ್ಲಿ ನಡೆಯುತ್ತಿದೆ.

ಈ ಆಶ್ರಮಕ್ಕೆ ಸಹಾಯ ಸಹಕಾರ ಮಾಡುವ ಪ್ರತಿಯೊಬ್ಬ ದಾನಿಗಳು ಕೂಡ ಈ ಕುಟುಂಬದ ಯಜಮಾನರುಗಳಾಗಿ ಆಶ್ರಮಕ್ಕೆ ಸ್ವಂತ ಜಾಗ ಕಲ್ಪಿಸುವಲ್ಲಿ ಮನಸ್ಸು ಮಾಡಲಿ ಎನ್ನುವುದು ನಮ್ಮ ನಿಮ್ಮೆಲ್ಲರ ಪ್ರಾರ್ಥನೆಯಾಗಿದೆ ಎಂದು ಭಾವನಾತ್ಮಕವಾಗಿ ಮಾತನಾಡಿ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ರಜಿಯಾ ಬೇಗಂ. ಮೈಬೂಬ್ ಸಾಬ್. ಹೈಫಾ ಮೊಹಮ್ಮದಿ. ರೇಷ್ಮಾ ಬೇಗಂ. ಮಹಮ್ಮದ್ ರಫಿ. ಹುಸೇನ್ ಬಿ. ತಸ್ಲೀಮ್. ಆಯಿಷಾ. ಮಿನಜಾ. ಶಾಹಿಸ್ತಾ. ಶೈಯಾನ್. ರಿಯಾನ್. ಶಾನ್ ವಾಜ್. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ. ಶ್ರೀ ಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಮತ್ತು ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ.ಮೀನಾಕ್ಷಮ್ಮ. ಲಕ್ಷ್ಮಿ. ಅನೇಕರು ಭಾಗವಹಿಸಿದ್ದರು.

## ನೇಮಕಾತಿ ಪ್ರಕಟಣೆ

ಜಿಲ್ಲಾ ಮ್ಯಾಜಿಸ್ಟ್ರೇಟ್ ಮತ್ತು ಕಲೆಕ್ಟರ್ ಕಚೇರಿ ಹಾವೇರಿ ನೇಮಕಾತಿ 2026–73 ಪೌರಕಾರ್ಮಿಕ (ನಾಗರಿಕ ಸೇವಕ) ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಜಿಲ್ಲಾ ಮ್ಯಾಜಿಸ್ಟ್ರೇಟ್ ಮತ್ತು ಕಲೆಕ್ಟರ್ ಕಚೇರಿ ಹಾವೇರಿ ನೇಮಕಾತಿ 2026: 73 ಪೌರಕಾರ್ಮಿಕ (ನಾಗರಿಕ ಸೇವಕ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಹಾವೇರಿ ಜಿಲ್ಲೆಯ ಪುರಸಭೆಗಳು ಪೌರಕಾರ್ಮಿಕ (ನಾಗರಿಕ ಸೇವಕ) ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ಮತ್ತು ಕಲೆಕ್ಟರ್ ಕಚೇರಿ ಹಾವೇರಿ ಅಧಿಕೃತ ಅಧಿಸೂಚನೆ ಏಪ್ರಿಲ್ 2026 ಮೂಲಕ ಆಹ್ವಾನಿಸಿದೆ. ಕರ್ನಾಟಕ – ಹಾವೇರಿಯಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 30–ಏಪ್ರಿಲ್–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 01–04–2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30–ಏಪ್ರಿಲ್–2026 ಅಧಿಕೃತ ವೆಬ್‌ಸೈಟ್: haveri.nic.in

# ಡಿಎಂಕೆ–ಕಾಂಗ್ರೆಸ್ ಮೈತ್ರಿ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸೋಣ ಸಂಸದ ಜಿ ಕುಮಾರ ನಾಯಕ

ನೈಜ್ಯ ದೆಸೆ ನ್ಯೂಸ್

**ಚೆನ್ನೈ: ತಮಿಳುನಾಡು ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಇಂದು ರಾಜ್ಯದ ವಿಧಾನಸಭಾ ಕ್ಷೇತ್ರಗಳ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಏರ್ಪಡಿಸಿದ್ದ ಮಹತ್ವದ ಪೂರ್ವಭಾವಿ ಸಭೆಯಲ್ಲಿ ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಜಿ ಕುಮಾರ ನಾಯಕ ರವರು ಸಭೆಯಲ್ಲಿ ಭಾಗವಹಿಸಿ ಮೈತ್ರಿ ಅಭ್ಯರ್ಥಿಗಳ ಗೆಲುವಿಗೆ ಪಕ್ಷದ ಎಲ್ಲಾ ಕಾರ್ಯಕರ್ತರು ಹಾಗೂ ಮುಖಂಡರು ಶ್ರಮಿಸೋಣ ಚುನಾವಣೆಯ ಪ್ರಣಾಳಿಕೆಯ ಅಂಶಗಳನ್ನು ಮತದಾರರ ಮನೆ ಮನೆಗೆ ಭೇಟಿ ನೀಡಿ ಮನವರಿಕೆ ಮಾಡಿ ಪಕ್ಷದ ಅಭ್ಯರ್ಥಿಗಳನ್ನು ಜಯಗಳಿಸೋಣ ಎಂದು ಮಾತನಾಡಿದರು.**

ಈ ಸಭೆಯಲ್ಲಿ ಡಿಎಂಕೆ?ಕಾಂಗ್ರೆಸ್ ಮೈತ್ರಿ ಅಭ್ಯರ್ಥಿಗಳ ಭರ್ಜರಿ ಗೆಲುವಿಗಾಗಿ ಸಮಗ್ರ ರಣತಂತ್ರ ರೂಪಿಸುವ ಕುರಿತು ಸುದೀರ್ಘ ಚರ್ಚಿಸಿದರು,ಸಭೆಯಲ್ಲಿ ತಮಿಳುನಾಡು ಕಾಂಗ್ರೆಸ್ ಕಮಿಟಿ ಅಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಶ್ರೀ ಕೆ. ಸೆಲ್ವಪೆರುಂಥಗೈ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮೈತ್ರಿ ಪಕ್ಷಗಳ ನಡುವಿನ ಸಂಘಟನಾ ಬಲವನ್ನು ಮತ್ತಷ್ಟು ಗಟ್ಟಿಗೊಳಿಸಿ, ತಳಮಟ್ಟದ ಕಾರ್ಯಕರ್ತರೊಂದಿಗೆ ನೇರ ಸಂಪರ್ಕ ಸಾಧಿಸುವ ಮೂಲಕ ಜನರ ವಿಶ್ವಾಸ



ಗಳಿಸುವುದು ಅತ್ಯಗತ್ಯ ಎಂದು ಹೇಳಿದರು. ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಮುಕುಲ್ ವಾಸ್ನಿಕ್ ಅವರು, ತಮಿಳುನಾಡಿನಲ್ಲಿ ಕಾಂಗ್ರೆಸ್ ಪಕ್ಷದ ಸಾಂಪ್ರದಾಯಿಕ ಬಲವನ್ನು ಮತ್ತಷ್ಟು ವೃದ್ಧಿಸಲು, ಯುವಜನತೆ ಹಾಗೂ ಮಹಿಳಾ ಮತದಾರರನ್ನು ಸೆಳೆಯುವ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಸೂಚಿಸಿದರು.

ಎಐಸಿಸಿ ಚುನಾವಣಾ ಉಸ್ತುವಾರಿಗಳಾದ ಶ್ರೀ ಗಿರೀಶ್ ಚಂದ್ವಾಕರ್ ಹಾಗೂ ಕಾರ್ಯದರ್ಶಿಗಳಾದ ಶ್ರೀ ಸೂರಜ್ ಹೆಗಡೆ ಅವರು, ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಬೂತ್ ಮಟ್ಟದ ಸಂಘಟನೆಯನ್ನು ಬಲಪಡಿಸುವುದು, ಡಿಜಿಟಲ್ ಪ್ರಚಾರವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವುದು ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಮತದಾರರೊಂದಿಗೆ ಸಂಪರ್ಕ ಹೆಚ್ಚಿಸುವ ಬಗ್ಗೆ ಮಾರ್ಗದರ್ಶನ ನೀಡಿದರು. ಸಭೆಯಲ್ಲಿ ಭಾಗವಹಿಸಿದ ಕರ್ನಾಟಕದ ಸಚಿವರಾದ ಶ್ರೀ ಕೆ.ಹೆಚ್. ಮುನಿಯಪ್ಪ ಮತ್ತು ಡಾ. ಸುಧಾಕರ್ ಅವರು, ತಮ್ಮ ರಾಜ್ಯದ ಚುನಾವಣಾ ಅನುಭವಗಳನ್ನು ಹಂಚಿಕೊಂಡು, ಮೈತ್ರಿ ಪಕ್ಷಗಳ ನಡುವೆ ಸಮನ್ವಯತೆ ಹಾಗೂ ಶಿಸ್ತಿನ ಪ್ರಚಾರವೇ ಜಯದ ಕೀಲಿಕೈ ಎಂದು ಹೇಳಿದರು.


ಕೆಪಿಸಿಸಿ ಕಾರ್ಯಧ್ಯಕ್ಷರಾದ ಶ್ರೀ ಎ ವಸಂತ್ ಕುಮಾರರವರು ಶಾಸಕರಾದ ಶ್ರೀ ಅಜಯ್ ಸಿಂಗ್, ಶ್ರೀ ಪ್ರಿಯಾ ಕೃಷ್ಣ ಹಾಗೂ ಡಾ. ಮಂತರ್ ಗೌಡ ಅವರು ಸಹ ಕಾರ್ಯಕರ್ತರ ಉತ್ಸಾಹ ಹೆಚ್ಚಿಸಲು ಸಮಗ್ರ ಯೋಜನೆಗಳನ್ನು ಅನುಸರಿಸುವ ಅಗತ್ಯವನ್ನು ಒತ್ತಿ ಹೇಳಿದರು. ಈ ಸಂದರ್ಭದಲ್ಲಿ ಪ್ರಮುಖವಾಗಿ ಕೆಳಗಿನ ಅಂಶಗಳ ಕುರಿತು ನಿರ್ಧಾರ ಕೈಗೊಳ್ಳಲಾಯಿತು: 1) ಪ್ರತಿ ಕ್ಷೇತ್ರದಲ್ಲಿ ಬೂತ್ ಮಟ್ಟದ ಸಮಿತಿಗಳನ್ನು ಪುನರ್‌ವ್ಯವಸ್ಥೆಗೊಳಿಸಿ ಕಾರ್ಯಕ್ಷಮಗೊಳಿಸುವುದು. 2) ಮನೆ ಮನೆಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸುವ ಅಭಿಯಾನ ಆರಂಭಿಸುವುದು. 3)ಯುವಕರು ಮತ್ತು ಮಹಿಳೆಯರನ್ನು ಸೆಳೆಯುವ ವಿಶೇಷ ಪ್ರಚಾರ ಕಾರ್ಯಕ್ರಮಗಳನ್ನು ರೂಪಿಸುವುದು.

4)ಡಿಎಂಕೆ ಕಾಂಗ್ರೆಸ್ ಮೈತ್ರಿ ಸಂದೇಶವನ್ನು ಸಮನ್ವಯದಿಂದ ಜನರಿಗೆ ತಲುಪಿಸುವುದು ಸಾಮಾಜಿಕ ಜಾಲತಾಣಗಳಲ್ಲಿ ಸಂಘಟಿತ ಮತ್ತು ಪರಿಣಾಮಕಾರಿ ಪ್ರಚಾರ ನಡೆಸುವುದು. ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ಲೋಕಸಭಾ ಸದಸ್ಯರು, ಶಾಸಕರು, ಹಿರಿಯ ನಾಯಕರು ಹಾಗೂ ಅಭ್ಯರ್ಥಿಗಳು ಉಪಸ್ಥಿತರಿದ್ದು, ಏಕಮತದಿಂದ ಮೈತ್ರಿ ಅಭ್ಯರ್ಥಿಗಳ ಗೆಲುವಿಗಾಗಿ ಶ್ರಮಿಸುವ ಸಂಕಲ್ಪ ವ್ಯಕ್ತಪಡಿಸಿದರು. ಈ ಸಭೆ ತಮಿಳುನಾಡಿನ ರಾಜಕೀಯದಲ್ಲಿ ಮೈತ್ರಿ ಪಕ್ಷಗಳ ಶಕ್ತಿಯನ್ನು ಮತ್ತಷ್ಟು ಬಲಪಡಿಸುವ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿದೆ...

## ಇರಾನ್ ಮೇಲೆ ಮತ್ತೆ ದಾಳಿ ಮಾಡುವುದಾಗಿ ಟ್ರಂಪ್ ಬೆದರಿಕೆ

ನೈಜ್ಯ ದೆಸೆ ನ್ಯೂಸ್

**ವಾಷಿಂಗ್ಟನ್: ಪಾಕಿಸ್ತಾನದ ಇಸ್ಲಾಮಾಬಾದ್‌ನಲ್ಲಿ ನಡೆದ ಅಮೆರಿಕ–ಇರಾನ್ ಮಾತುಕತೆ ವಿಫಲಗೊಂಡ ಬೆನ್ನಲ್ಲೇ ಅಧ್ಯಕ್ಷ ಡೊನಾ;ಲ್ಡ್ ಟ್ರಂಪ್ ಅವರು ಇರಾನ್ ಮೇಲೆ ಮತ್ತೆ ದಾಳಿ ನಡೆಸುವ ಬೆದರಿಕೆಯೊಡ್ಡಿದ್ದಾರೆ. ಮಾತುಕತೆ ವಿಫಲವಾದರೆ ಯುದ್ಧವೇ ಪರ್ಯಾಯ ಎಂದು ಮೊದಲೇ ಟ್ರಂಪ್ ಹೇಳಿದ್ದರು. ಹಾರ್ಮುಜ್ ಜಲಸಂಧಿಯನ್ನು ಅಮೆರಿಕವೇ ಮುಕ್ತಗೊಳಿಸುತ್ತದೆ ಎಂದು ಹೇಳಿದ್ದಾರೆ. ಒಪ್ಪಂದ ಮಾಡಿಕೊಳ್ಳದಿರುವ ಇರಾನ್‌ನ ನಿಲುವನ್ನು ದುರಾದೃಷ್ಟಕರ ಎಂದು ಕರೆದಿರುವ ಟ್ರಂಪ್ ಮತ್ತೆ ದಾಳಿಯ ಸುಳಿವು ನೀಡಿದ್ದಾರೆ.**



ಇಸ್ಲಾಮಾಬಾದ್ ಮಾತುಕತೆ ವಿಫಲವಾದ 24 ಗಂಟೆಗಳೊಳಗೇ ಟ್ರಂಪ್ ಈ ಹೇಳಿಕೆ ನೀಡಿದ್ದಾರೆ. ಇದನ್ನು ಇರಾನ್ ವಿರುದ್ಧದ ಮಿಲಿಟರಿ ಕಾರ್ಯಾಚರಣೆಯ ಸನ್ನದ್ಧತೆ ಎಂದೇ ಅರ್ಥೈಸಲಾಗುತ್ತಿದೆ. ಪೆಂಟಗನ್ ಈಗಾಗಲೇ ಆ ಪ್ರದೇಶದಲ್ಲಿ ಹೆಚ್ಚುವರಿ ನೌಕಾ ಮತ್ತು ವಾಯುಪಡೆಯನ್ನು ನಿಯೋಜಿಸಿದೆ ಎಂಬ ವರದಿಗಳಿವೆ. ಅಲ್ಲದೆ, ಇಸ್ರೇಲ್ ಕೂಡ ಇರಾನ್ ವಿರುದ್ಧ ಸ್ವತಂತ್ರ ಕಾರ್ಯಾಚರಣೆಗೆ ಸಿದ್ಧತೆ ನಡೆಸುತ್ತಿರುವ ಸೂಚನೆಗಳಿವೆ. ಮಾತುಕತೆಗಳು ಯಾವುದೇ ಫಲಿತಾಂಶಗಳನ್ನು ನೀಡದ ನಂತರ ಅಧ್ಯಕ್ಷರು ಟೆಹ್ರಾನ್ ವಿರುದ್ಧ ಯಾವ ಕ್ರಮಗಳನ್ನು ತೆಗೆದುಕೊಳ್ಳಬಹುದು ಎಂಬುದರ ಕುರಿತು ಬೆಳಕು ಚೆಲ್ಲುವ ಜಸ್ಟ್ ದಿ ನ್ಯೂಸ್ ವೆಬ್‌ಸೈಟ್‌ನಿಂದ ಬಂದ ಲೇಖನವನ್ನು ಟ್ರಂಪ್ ಟ್ರುತ್ ಸೋಶಿಯಲ್‌ಗೆ ಮರು ಪೋಸ್ಟ್ ಮಾಡಿದ್ದಾರೆ. ಹಾರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸುವ ಟ್ರಂಪ್ ಹೇಳಿಕೆಯ ಹಿನ್ನೆಲೆಯಲ್ಲಿ ಅಂತಾರಾಷ್ಟ್ರೀಯ ತೈಲ ಬೆಲೆಗಳು ಏರಿಕೆಯಾಗಿವೆ. ವಿಶ್ವಸಂಸ್ಥೆ ಮತ್ತು ಯುರೋಪಿಯನ್ ಒಕ್ಕೂಟ ತಕ್ಷಣ ಶಾಂತಿ ಮಾತುಕತೆಗೆ ಕರೆ ನೀಡಿವೆ. ಆದರೆ ಟ್ರಂಪ್ ಸದ್ಯಕ್ಕೆ ಯಾವುದೇ ಮತ್ತೊಂದು ಸಂಧಾನದ ಸಾಧ್ಯತೆಯನ್ನು ತಳ್ಳಿಹಾಕಿದ್ದಾರೆ. ಇರಾನ್ ನಮ ಷರತ್ತುಗಳನ್ನು ಒಪ್ಪುವವರೆಗೆ ಯಾವುದೇ ಮಾತುಕತೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇರಾನ್ ಕಡೆಯಿಂದ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ, ಅಲ್ಲಿನ ವರಿಷ್ಠ ನಾಯಕ ಅಯಾತೊಲ್ಲಾ ಖಮೇನಿ ಅವರು ಯಾವುದೇ ಬೆದರಿಕೆಗೆ ಸಮರ್ಪಕವಾಗಿ ಪ್ರತಿಕ್ರಿಯಿಸುವುದಾಗಿ ಹೇಳಿದ್ದಾರೆ. ಇಸ್ಲಾಮಾಬಾದ್ ಮಾತುಕತೆಗೆ ಮುನ್ನವೇ ಟ್ರಂಪ್ ಅವರು, ಇರಾನ್ ಪರಮಾಣು ಒಪ್ಪಂದಕ್ಕೆ ಬರದಿದ್ದರೆ ಮಿಲಿಟರಿ ಕಾರ್ಯಾಚರಣೆ ಅನಿವಾರ್ಯ ಎಂದು ಎಚ್ಚರಿಕೆ ನೀಡಿದ್ದರು.

# ಗ್ರಾಮಗಳ ಮೂಲಭೂತ ಸೌಕರ್ಯಕ್ಕೆ ಆದ್ಯತೆ: ಶಾಸಕ ರಾಜುಗೌಡ



ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಮತಕ್ಷೇತ್ರ ವ್ಯಾಪ್ತಿಗೆ ಬರುವ ಎಲ್ಲ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳಾದ ಶುದ್ಧ ಕುಡಿವ ನೀರು, ಸುಸಜ್ಜಿತ ರಸ್ತೆ, ಸಮರ್ಪಕ ವಿದ್ಯುತ್, ಆರೋಗ್ಯ ಹಾಗೂ ಶಿಕ್ಷಣಕ್ಕೆ ಒತ್ತುಕೊಟ್ಟು ಆದ್ಯತೆ ಮೇರೆಗೆ ಕೆಲಸ ಮಾಡುತ್ತಿದ್ದೇನೆ ಇದಕ್ಕೆ ನಿಮ್ಮೆಲ್ಲರ ಸಹಕಾರ ಇರಲಿ ಎಂದು ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ(ಕು.ಸಾಲವಾಡಗಿ)ಹೇಳಿದರು.**

ಶುಕ್ರವಾರ ದೇವರ ಹಿಪ್ಪರಗಿ ಮತಕ್ಷೇತ್ರ ವ್ಯಾಪ್ತಿಯ ಹಂಚಲಿ ಗ್ರಾಮದಲ್ಲಿ ರೂ.50 ಲಕ್ಷ ವೆಚ್ಚದ ಸಿಸಿ ರಸ್ತೆ ಹಾಗೂ ರೂ.5 ಲಕ್ಷ ವೆಚ್ಚದ ಶ್ರೀ ಸೋಮನಾಥ ದೇವಸ್ಥಾನ ಸಮುದಾಯ ಭವನಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿ ಅನುದಾನ ಪಡೆಯುವಲ್ಲಿ ಸಾಕಷ್ಟು ತೊಂದರೆಗಳಿದ್ದರೂ ಶಕ್ತಿಮೀರಿ ಪ್ರಯತ್ನಿಸಿ ಅನುದಾನ ತಂದು ಕ್ಷೇತ್ರದ ಅಭಿವೃದ್ಧಿಗೆ ಕೆಲಸ ಮಾಡುತ್ತಿದ್ದೇನೆ. ಕ್ಷೇತ್ರದ ಸಮಗ್ರ ಅಭಿವೃದ್ಧಿ ಆಗಬೇಕಾದರೆ ಗ್ರಾಮಗಳ ಅಭಿವೃದ್ಧಿ ಅಗತ್ಯವಾಗಿದೆ.

ಅನುದಾನವನ್ನು ತಂದು ಹಂತ ಹಂತವಾಗಿ ಕ್ಷೇತ್ರದ ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸುತ್ತಿದ್ದೇನೆ ಇಂದು ಈ ಗ್ರಾಮದ ಜೊತೆಗೆ ಕ್ಷೇತ್ರದ ತಿಳಗೂಳ ಗ್ರಾಮದಲ್ಲಿ ಮಾರುತೇಶ್ವರ ಮಠದ ಸಮುದಾಯ ಭವನಕ್ಕೆ 10 ಲಕ್ಷ ಹಾಗೂ ಸಿಸಿ ರಸ್ತೆ ನಿರ್ಮಾಣಕ್ಕೆ 50 ಲಕ್ಷ ಮತ್ತು ಕಾಳಿಕಾದೇವಿ ದೇವಸ್ಥಾನ ಸಮುದಾಯ ಭವನಕ್ಕೆ 5 ಲಕ್ಷ, ಕೆರೂಟಗಿ ಗ್ರಾಮದ ಲಕ್ಷ್ಮಿ ದೇವಸ್ಥಾನ ಸಮುದಾಯ ಭವನಕ್ಕೆ 5 ಲಕ್ಷ, ಸಿಸಿ ರಸ್ತೆ ನಿರ್ಮಾಣಕ್ಕೆ 50 ಲಕ್ಷ, ವರ್ಕನಹಳ್ಳಿ ಗ್ರಾಮದ ಸಿಸಿ ರಸ್ತೆಗೆ 50 ಲಕ್ಷ, ಹಿರೊಡೇಶ್ವರ ದೇವಸ್ಥಾನದ ಸಮುದಾಯ ಭವನಕ್ಕೆ 10 ಲಕ್ಷ ಹಾಗೂ ಕೋರವಾರ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ 1 ಕೋಟಿ, ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡ ನಿರ್ಮಾಣಕ್ಕೆ 266 ಲಕ್ಷ ಹಾಗೂ ವಿವಿಧ ಸಮುದಾಯಗಳ ಭವನಗಳ ನಿರ್ಮಾಣಕ್ಕೆ 15 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಲಾಯಿತು.

ಎಂದು ತಿಳಿಸಿದ ಅವರು ಕ್ಷೇತ್ರದ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ ಜೆಜೆಎಂ ಯೋಜನೆಯ ಕೆಲಸ ಮುಕ್ತಾಯಗೊಂಡಿದ್ದು ಆದಷ್ಟು ಬೇಗ ನೀರು ಪೂರೈಸುವ ವ್ಯವಸ್ಥೆ ಮಾಡಲಾಗುವುದು ಕೆಲವು ಗ್ರಾಮಗಳಲ್ಲಿ ಪರ್ಯಾಯ ವ್ಯವಸ್ಥೆಗಾಗಿ ಬೋರವೆಲ್ ಗಳನ್ನು ಬಳಸಿಕೊಳ್ಳಲಾಗುವುದು ಎಂದ ಅವರು ಕಳೆದ ಮೂರು ವರ್ಷಗಳಿಂದ ನೀವು ನನ್ನೊಂದಿಗೆ ಸಹಕರಿಸಿದ್ದೀರಿ ನಿಮ್ಮ ಸಹಕಾರ ಇದೇ ರೀತಿ ಮುಂದೆಯೂ ಇರಲಿ, ನಿಮ್ಮ ಪ್ರೀತಿ ವಿಶ್ವಾಸಕ್ಕೆ ಧಕ್ಕೆ ಬಾರದಹಾಗೆ ಕೆಲಸ ಮಾಡುತ್ತೇನೆ ಎಂದರು. ಮುಖಂಡ ಶರಣಬಸ್ಸು ಇಟಗಿ ಮಾತನಾಡಿ ಶಾಸಕರು ಮಾತು ಕೊಟ್ಟಂತೆ ಕೆಲಸ ಮಾಡಿದ್ದಾರೆ ನಮ್ಮ ಗ್ರಾಮಕ್ಕೆ ನೀರಿನ ತೊಂದರೆ ಇದೆ ಆದಷ್ಟು ಬೇಗ ಈ ಸಮಸ್ಯೆಯನ್ನು ಪರಿಹರಿಸಬೇಕು ಅವರಿಗೆ ನಾನು ಗ್ರಾಮಸ್ಥರು ಪರವಾಗಿ ಅಭಿನಂದಿಸುತ್ತೇನೆ ಎಂದರು. ಇದೇ ಸಂದರ್ಭದಲ್ಲಿ ಶಾಸಕ ರಾಜುಗೌಡ ಪಾಟೀಲ ಹಾಗೂ ಮುಖಂಡ ಶೇಖರಗೌಡ ಪಾಟೀಲ(ಕೋರವಾರ) ಇವರನ್ನು ಗ್ರಾಮಸ್ಥರಿಂದ ಸನ್ಮಾನಿಸಲಾಯಿತು. ಈ ಸಮಯದಲ್ಲಿ ಮುಖಂಡರಾದ ವಿಜಯಕುಮಾರ ಹಿರೇಮಠ, ದೊಡ್ಡಯ್ಯ ಹಿರೇಮಠ,ಕಲ್ಲಪ್ಪ ಹೊಸಮನಿ, ಮಹೇಶ ಬಾಗೇವಾಡಿ, ಸೋಮು ಹಟ್ಟಿ, ರಾಮನಗೌಡ ಹಚ್ಚಾಳ,ಬಾಬು ತೈನೂರ, ಸಂತೋಷ್ ಸಜ್ಜನ,ಕೆ.ಆರ್. ಐ.ಡಿ.ಎಲ್.ನ ಪ್ರಫುಲಕುಮಾರ,ಸಾಹೇಬಗೌಡ ಬಿರಾದಾರ, ಮಹಾಂತೇಶ ಹಾಗೂ ಗ್ರಾಮಸ್ಥರು ಇದ್ದರು.






## ದಿ. ಡಾ। ಎಚ್.ಎಸ್. ತೋಟದ್ ರವರ ಮೊದಲನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜನೆ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ತೋಟದ್ ಆಸ್ಪತ್ರೆ ವತಿಯಿಂದ ಡಾ? ದಿ? ಎಚ್.ಎಸ್. ತೋಟದ್ ರವರ ಮೊದಲನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಏಪ್ರಿಲ್ 14ರಂದು ಮಂಗಳವಾರ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.**

ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ನಡೆಯಲಿರುವ ಈ ಶಿಬಿರದಲ್ಲಿ ಸಾರ್ವಜನಿಕರಿಗೆ ರಕ್ತದೊತ್ತಡ (BP), ಶುಗರ್ ಪರೀಕ್ಷೆ, ಇಸಿಜಿ (ECG) ಪರೀಕ್ಷೆ ಸೇರಿದಂತೆ ಸಾಮಾನ್ಯ ಆರೋಗ್ಯ ತಪಾಸಣೆಗಳನ್ನು ಸಂಪೂರ್ಣ ಉಚಿತವಾಗಿ ನಡೆಸಲಾಗುತ್ತದೆ. ಆರೋಗ್ಯ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಶಿಬಿರವನ್ನು ಆಯೋಜಿಸಲಾಗಿದೆ




ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ. ಶಿಬಿರದಲ್ಲಿ ಖ್ಯಾತ ವೈದ್ಯರಾದ ಡಾ? ಹರ್ಷ ತೋಟದ್ (M.D ? ಜನರಲ್ ಫಿಜಿಷಿಯನ್) ಹಾಗೂ ಡಾ? ಸೀಮಾ ತೋಟದ್ (ರೇಡಿಯಾಲಜಿಸ್ಟ್) ಅವರು ಭಾಗವಹಿಸಿ ರೋಗಿಗಳಿಗೆ ಆರೋಗ್ಯ ಸಲಹೆ, ತಪಾಸಣೆ ಹಾಗೂ ಅಗತ್ಯ ವೈದ್ಯಕೀಯ ಮಾರ್ಗದರ್ಶನ ನೀಡಲಿದ್ದಾರೆ. ಸಿಂಧನೂರು ನಗರದ ಬಸ್ ಸ್ಟ್ಯಾಂಡ್ ಎದುರುಗಡೆಯಲ್ಲಿರುವ ತೋಟದ್ ಆಸ್ಪತ್ರೆ ಆವರಣದಲ್ಲಿ ಶಿಬಿರ ನಡೆಯಲಿದ್ದು, ಆಗಮಿಸುವ ಸಾರ್ವಜನಿಕರಿಗಾಗಿ ಅನ್ನಪ್ರಸಾದ ವ್ಯವಸ್ಥೆಯನ್ನೂ ಮಾಡಲಾಗಿದೆ. ಆರೋಗ್ಯವೇ ಮಹಾಭಾಗ್ಯ ಎಂಬ ಸಂದೇಶದೊಂದಿಗೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಉಚಿತ ಆರೋಗ್ಯ ಸೇವೆಯ ಸದುಪಯೋಗ ಪಡೆಯುವಂತೆ ತೋಟದ್ ಆಸ್ಪತ್ರೆ ಆಡಳಿತ ಮಂಡಳಿ ಮನವಿ ಮಾಡಿದೆ.

## ಸಚಿವ ಸಂಪುಟ ವಿಸ್ತರಣೆ ಚರ್ಚೆಗೆ ವೇಗ ದೆಹಲಿಯಲ್ಲಿ ರಾಜಕೀಯ ಚಟುವಟಿಕೆಗಳು ಚುರುಕು

**ಕರ್ನಾಟಕ ಉಪ ಚುನಾವಣೆಗಳು ಮುಕ್ತಾಯವಾದ ಬೆನ್ನಲ್ಲೇ ರಾಜ್ಯ ರಾಜಕೀಯದಲ್ಲಿ ಸಚಿವ ಸಂಪುಟ ವಿಸ್ತರಣೆ ವಿಚಾರ ಮತ್ತೆ ಚರ್ಚೆಯ ಕೇಂದ್ರಬಿಂದುವಾಗಿದೆ. ರಾಜ್ಯ ಸರ್ಕಾರ ಮೂರು ವರ್ಷಗಳ ಆಡಳಿತಾವಧಿ ಪೂರ್ಣಗೊಳಿಸುತ್ತಿರುವ ಹಿನ್ನೆಲೆಯಲ್ಲಿ ಸಂಪುಟ ಪುನರ್‌ರಚನೆ ಅನಿವಾರ್ಯ ಎನ್ನುವ ಮಾತುಗಳು ರಾಜಕೀಯ ವಲಯದಲ್ಲಿ ಕೇಳಿಬರುತ್ತಿವೆ.**

ಸಚಿವ ಸ್ಥಾನಾಕಾಂಕ್ಷಿಗಳಾದ 25ಕ್ಕೂ ಹೆಚ್ಚು ಶಾಸಕರು ಪಕ್ಷದ ಹೈಕಮಾಂಡ್ ನಾಯಕರನ್ನು ಭೇಟಿಯಾಗುವ ಸಲುವಾಗಿ ದೆಹಲಿಗೆ ತೆರಳಿರುವುದು ಚರ್ಚೆಗೆ ಕಾರಣವಾಗಿದೆ. ಆಡಳಿತದಲ್ಲಿ ತಮ್ಮ ಕೊಡುಗೆ, ಕ್ಷೇತ್ರದ ಅಭಿವೃದ್ಧಿ ಹಾಗೂ ರಾಜಕೀಯ ಸಮತೋಲನದ ಆಧಾರದ ಮೇಲೆ ಸಚಿವ ಸ್ಥಾನ ನೀಡುವಂತೆ ಶಾಸಕರು ಮನವಿ ಸಲ್ಲಿಸುತ್ತಿದ್ದಾರೆ ಎಂದು ತಿಳಿದುಬಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಕಾರ್ಯಕ್ಷಮತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಸಂಪುಟದಲ್ಲಿ ಕೆಲ ಬದಲಾವಣೆಗಳು ಸಾಧ್ಯವೆಂದು ರಾಜಕೀಯ ವಲಯ ಅಂದಾಜು ಮಾಡುತ್ತಿದೆ.

ಪ್ರಾದೇಶಿಕ ಸಮತೋಲನ, ಸಮುದಾಯ ಪ್ರತಿನಿಧಿತ್ವ, ಯುವ ನಾಯಕರಿಗೆ ಅವಕಾಶ ಹಾಗೂ ಸಂಘಟನೆ



ಬಲಪಡಿಸುವ ಅಂಶಗಳನ್ನು ಪರಿಗಣಿಸಿ ಸಚಿವ ಸಂಪುಟ ವಿಸ್ತರಣೆ ನಡೆಯುವ ಸಾಧ್ಯತೆ ಇದೆ. ಇದೇ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ರಾಜ್ಯ ನಾಯಕರು ಹೈಕಮಾಂಡ್ ಜೊತೆ ನಿರಂತರ ಸಂಪರ್ಕದಲ್ಲಿದ್ದು ಅಂತಿಮ ತೀರ್ಮಾನ ಶೀಘ್ರದಲ್ಲೇ ಹೊರಬರುವ ನಿರೀಕ್ಷೆ ವ್ಯಕ್ತವಾಗಿದೆ.

ಸಚಿವ ಸಂಪುಟ ವಿಸ್ತರಣೆ ಘೋಷಣೆ ಯಾವಾಗ ಹೊರಬೀಳಲಿದೆ ಹಾಗೂ ಯಾರಿಗೆ ಸಚಿವ ಸ್ಥಾನ ದೊರೆಯಲಿದೆ ಎಂಬ ಕುತೂಹಲ ರಾಜಕೀಯ ವಲಯದಲ್ಲಿ ಹೆಚ್ಚಾಗಿದೆ. ದೆಹಲಿಗೆ ತೆರಳಿದ ಪ್ರಮುಖ ಶಾಸಕರ ಪಟ್ಟಿ ಟಿ.ಬಿ. ಜಯಚಂದ್ರ ಶಿರಾ ಅಶೋಕ್ ಪಟ್ಟಣ್ ರಾಮದುರ್ಗ ಎಸ್.ಎನ್. ಸುಬ್ಬಾರೆಡ್ಡಿ ಬಾಗೇಪಲ್ಲಿ ಸಿ. ಪುಟ್ಟರಂಗಶೆಟ್ಟಿ ಚಾಮರಾಜನಗರ ಹಂಪನಗೌಡ ಬಾದರ್ಲಿ ಸಿಂಧನೂರು ಡಿ.ಜಿ. ಶಾಂತನಗೌಡ ಹೊನ್ನಾಳಿ ಬಸವರಾಜ್ ಶಿವಣ್ಣನವರ್ ಬ್ಯಾಡಗಿ ಎ.ಆರ್. ಕೃಷ್ಣಮೂರ್ತಿ ಕೊಳ್ಳೇಗಾಲ ಪ್ರಸಾದ್ ಅಬ್ಬಯ್ಯ ಹುಬ್ಬಳ್ಳಿ ಧಾರವಾಡ ಪೂರ್ವ ಯು.ಬಿ. ಬಣಕರ್ ಹಿರೇಕೆರೂರು ಜಿ.ಎಸ್. ಪಾಟೀಲ್ ರೋಣ ಯಶವಂತರಾಯಗೌಡ ಪಾಟೀಲ್ ಇಂಡಿ ಕೆ. ಷಡಕ್ಷರಿ ತಿಪಟೂರು ಎಸ್.ಎನ್. ನಾರಾಯಣಸ್ವಾಮಿ ಬಂಗಾರಪೇಟೆ ಲಕ್ಷ್ಮಣ ಸವದಿ ಅಥಣಿ ಅಪ್ಪಾಜಿ ನಾಡಗೌಡ ? ಮುದ್ದೇಬಿಹಾಳ ಪ್ರಿಯಕೃಷ್ಣ ? ಗೋವಿಂದರಾಜನಗರ ರಮೇಶ್ ಬಂಡಿಸಿದ್ದೇಗೌಡ ಶ್ರೀರಂಗಪಟ್ಟಣ ಬಿ. ಶಿವಣ್ಣ ? ಆನೇಕಲ್ ರಾಘವೇಂದ್ರ ಹಿಟ್ನಾಳ್ ? ಕೊಪ್ಪಳ ಬೇಳೂರು ಗೋಪಾಲಕೃಷ್ಣ ? ಸಾಗರ

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಸೆರಾಮಿಕ್ ಮತ್ತು ಸಿಮೆಂಟ್ ತಂತ್ರಜ್ಞಾನ

ಬಿ.ಟೆಕ್ ಬಿಗ್ ಡೇಟಾ ಅನಾಲಿಟಿಕ್ಸ್ ಹಾಗೂ ಡೇಟಾ ಸೈನ್ಸ್ ಎಂಬುದು ಆಧುನಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಅತ್ಯಂತ ಬೇಡಿಕೆಯಿರುವ ಅಧ್ಯಯನ ವಿಭಾಗವಾಗಿದೆ. ಡೇಟಾ ಸೈನ್ಸ್ ಅನ್ನು ಸಾಮಾನ್ಯವಾಗಿ ಡೇಟಾ ವಿಶ್ಲೇಷಣೆ (Data Analysis) ಎಂದೂ ಕರೆಯಲಾಗುತ್ತದೆ. ಇದು ಡೊಮೇನ್ ಜ್ಞಾನ, ಪ್ರೋಗ್ರಾಮಿಂಗ್ (Coding) ಸಾಮರ್ಥ್ಯ, ಗಣಿತ ಹಾಗೂ ಸಂಖ್ಯಾಶಾಸ್ತ್ರದ ತಿಳುವಳಿಕೆಯನ್ನು ಸಂಯೋಜಿಸಿ ಡೇಟಾದಿಂದ ಉಪಯುಕ್ತ ಮಾಹಿತಿಯನ್ನು ಹೊರತೆಗೆಯುವ ವಿಧಾನವಾಗಿದೆ. ಈ ಕ್ಷೇತ್ರದಲ್ಲಿ ಸಂಖ್ಯೆಗಳು, ಪಠ್ಯ, ಚಿತ್ರಗಳು, ವೀಡಿಯೊ, ಆಡಿಯೋ ಸೇರಿದಂತೆ ವಿವಿಧ ರೀತಿಯ ಡೇಟಾಗಳನ್ನು ವಿಶ್ಲೇಷಿಸಲು ಯಂತ್ರ ಕಲಿಕೆ (Machine Learning) ಅಲ್ಗಾರಿದಮ್‌ಗಳನ್ನು ಬಳಸಲಾಗುತ್ತದೆ. ಇದರ ಮೂಲಕ ಮಾನವ ಬುದ್ಧಿಮತ್ತೆಯ ಅಗತ್ಯವಿರುವ ಅನೇಕ ಕಾರ್ಯಗಳನ್ನು ಸ್ವಯಂಚಾಲಿತವಾಗಿ ನಿರ್ವಹಿಸಬಲ್ಲ ಕೃತಕ ಬುದ್ಧಿಮತ್ತೆ (Artificial Intelligence ? AI) ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸಲಾಗುತ್ತದೆ. ಈ ಕೋರ್ಸ್‌ನಲ್ಲಿ ಕಲಿಯುವ ವಿಷಯಗಳು: ಡೇಟಾ ಅನಾಲಿಸಿಸ್ ಮಷಿನ್ ಲರ್ನಿಂಗ್ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಪೈಥಾನ್ ಪ್ರೋಗ್ರಾಮಿಂಗ್ ಬಿಗ್ ಡೇಟಾ ಟೆಕ್ನಾಲಜಿ ಕ್ಲೌಡ್ ಕಂಪ್ಯೂಟಿಂಗ್ ಡೇಟಾ ವಿಸ್ಯುಅಲೈಸೇಶನ್ ಉದ್ಯೋಗ ಅವಕಾಶಗಳು: Data Scientist Data Analyst Machine Learning Engineer AI Engineer Business Analyst Big Data Engineer ಇಂದಿನ ಡಿಜಿಟಲ್ ಯುಗದಲ್ಲಿ ಡೇಟಾ ಸೈನ್ಸ್ ಮತ್ತು ಬಿಗ್ ಡೇಟಾ ಕ್ಷೇತ್ರಗಳಿಗೆ ಭಾರತದಲ್ಲಿಯೂ ಹಾಗೂ ವಿದೇಶಗಳಲ್ಲಿಯೂ ಹೆಚ್ಚಿನ ಉದ್ಯೋಗ ಅವಕಾಶಗಳಿವೆ.




## ಬಿಸಿಲ ಬೇಗೆಗೆ ತತ್ತರಿಸಿದ ಜನ :ಎಸಿ, ಕೂಲರ್‌ಗಳಿಗೆ ಫುಲ್ ಡಿಮ್ಯಾಂಡ್

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಬಿರುಬೇಸಿಗೆಯ ಬಿಸಿಲು ರಾಜ್ಯದ ಜನತೆಯನ್ನು ಬೆಂಡಾಗಿಸಿದ್ದು ಮನೆಯಲ್ಲಿದ್ದರೆ ಸೆಖೆ, ಹೊರಗಡೆ ಬಂದರೆ ಬಿಸಿಲ ಧಗೆಯಿಂದ ಬಳಲುವಂತಾಗಿದೆ. ಕೂಲ್‌ಸಿಟಿ ಗಾರ್ಡನ್‌ಸಿಟಿಯಲ್ಲಿ ಸದ್ಯ ಹಗಲಿನಲ್ಲಿ 35 ರಿಂದ 36 ಡಿಗ್ರಿ ತಾಪಮಾನ ಇದ್ದು ರಾತ್ರಿ ವೇಳೆ 24 ರಿಂದ 26 ಡಿಗ್ರಿ ತಾಪಮಾನ ದಾಖಲಾಗುತ್ತಿದ್ದು, ಜನರು ನೆಮದಿಯಾಗಿ ನಿದ್ರೆ ಮಾಡಲು ಪರದಾಡುವಂತಾಗಿದೆ.**



ಎಸಿ, ಕೂಲರ್, ಫ್ಯಾನ್‌ಗಳು ಸಹ ಬಿಟ್ಟೂ ಬಿಡದಂತೆ ಚಾಲನೆಯಲ್ಲಿರಬೇಕಾದಂತಹ ಪರಿಸ್ಥಿತಿ ಬಂದಿದೆ.ಸೆಖೆಯನ್ನು ತಾಳಲಾರದೆ ಜನತೆ ಏರ್‌ಕೂಲರ್, ಎಸಿ , ಫ್ಯಾನ್‌ಗಳ ಖರೀದಿಗಾಗಿ ಮುಂದಾಗಿದ್ದು, ಎಲೆಕ್ಟ್ರಾನಿಕ್?ಸ ಅಂಗಡಿಗಳು ಹಾಗೂ ಆನ್‌ಲೈನ್‌ನಲ್ಲಿ ಖರೀದಿ ಭರದಿಂದ ಸಾಗಿದೆ. ಬೆಳಿಗ್ಗೆ 8 ಗಂಟೆಗೆ ನೆತ್ತಿ ಸುಡುವ ಬಿರುಬಿಸಿಲು ಏರುತ್ತಿದ್ದು, ಸಿಂಟೆಕ್ಸ್ ಗಳಲ್ಲಿ ನೀರು ಬಿಸಿಯಾಗಿ ಸ್ನಾನಕ್ಕೂ ಕೂಡ ಗೀಸರ್, ಸೋಲಾರ್ ಅವಶ್ಯಕತೆ ಇಲ್ಲದಂತಾಗಿದೆ. ಶಾಲೆಗಳಿಗೆ ಬೇಸಿಗೆ ರಜೆಯಿದ್ದು, ಮಕ್ಕಳನ್ನು ಸೆಖೆಯಿಂದ ಹಾಗೂ ಬಿಸಿಲಿನಿಂದ ಕಾಪಾಡಿಕೊಳ್ಳುವುದೇ ಪೋಷಕರಿಗೆ ಒಂದು ಸವಾಲಾಗಿ ಪರಿಣಮಿಸಿದೆ. ಹೊರಗಡೆ ಆಟವಾಡಲು ಬಿಟ್ಟರೆ ಬಿಸಿಲು ನೇರವಾಗಿ ಚರ್ಮದ ಮೇಲೆ ತಾಕುತ್ತಿದ್ದು ಚರ್ಮಕ್ಕೆ ಸಂಬಂಧಿಸಿದ ಸಮಸ್ಯೆಗಳು ಎದುರಾಗುತ್ತಿವೆ. ಇನ್ನು ಮಳೆಯೊಳಗೆ ಮಕ್ಕಳನ್ನಿಟ್ಟುಕೊಂಡರೆ ಸಂಬಾಳಿಸುವುದು ತೀರಾ ಕಷ್ಟಕರವಾಗಿದೆ.ಕೆಲವರು ಮಕ್ಕಳನ್ನು ಬೇಸಿಗೆ ಶಿಬಿರ, ಈಜುಕೊಳಗಳಿಗೆ ಕಳುಹಿಸುತ್ತಿದ್ದಾರೆ. ನಗರದಲ್ಲಿರುವ ಈಜುಕೊಳಗಳಿಗೆ ಬೇಡಿಕೆ ಹೆಚ್ಚಾಗಿದೆ. ಗಂಟೆ ಲೆಕ್ಕದಲ್ಲಿ ದರ ನಿಗದಿ ಮಾಡಿದ್ದು, ದೊಡ್ಡವರಿಗೆ ಗಂಟೆಗೆ 150 ರೂ., ಮಕ್ಕಳಿಗೆ 100 ರೂ.ಗಳಂತೆ ದರ ನಿಗದಿ ಮಾಡಿದ್ದು, ಅಲ್ಲೂ ಕೂಡ ಜನವೋ ಜನ. ಇನ್ನು ಗ್ರಾಮೀಣ ಪ್ರದೇಶದಲ್ಲಿ ದೊಡ್ಡ ದೊಡ್ಡ ತೊಟ್ಟಿ, ಬಾವಿ, ಕೆರೆಕಟ್ಟೆಗಳಲ್ಲಿ ಈಜಾಡುತ್ತಾ ದೇಹ ತಣಿಸಿಕೊಳ್ಳುತ್ತಿದ್ದಾರೆ. ಆದರೆ ಹಳ್ಳಿಗಳಲ್ಲಿ ಕೆರೆಕಟ್ಟೆಗಳಲ್ಲಿ ಈಜಾಡುವ ಮುನ್ನ ಮಕ್ಕಳು ಎಚ್ಚರ ವಹಿಸುವುದು ಸೂಕ್ತ.

## ಪುದುಕ್ಕೊಟ್ಟೈ ಜಿಲ್ಲೆ ವ್ಯಾಪ್ತಿಯ ಅರಂತಂಗಿ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಡಿಎಂಕೆ ಮೈತ್ರಿ ಅಭ್ಯರ್ಥಿಯಾದ ಎಸ್.ಟಿ. ರಾಮಚಂದ್ರನ್ ಅವರ ಪರ ಭರ್ಜರಿ ಪ್ರಚಾರ ನಡೆಸಿದ ರಾಯಚೂರು ಸಂಸದ ಜಿ ಕುಮಾರ್ ನಾಯಕ್

❑ ನೈಜ್ಯ ದೆಸೆ ನ್ಯೂಸ್

**ತಮಿಳುನಾಡಿನ ತಮಿಳುನಾಡು ರಾಜ್ಯದ ಪುದುಕ್ಕೊಟ್ಟೈ ಜಿಲ್ಲೆ ವ್ಯಾಪ್ತಿಯ ಅರಂತಂಗಿ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್?ಡಿಎಂಕೆ ಮೈತ್ರಿ ಅಭ್ಯರ್ಥಿಯಾದ ಎಸ್.ಟಿ. ರಾಮಚಂದ್ರನ್ ಅವರ ಪರ ಚುನಾವಣಾ ಪ್ರಚಾರ ಜೋರಾಗಿ ನಡೆಯಿತು. ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ್ ನಾಯಕ್ ಅವರು ಕ್ಷೇತ್ರದ ವಿವಿಧ ಭಾಗಗಳಲ್ಲಿ ಸಾರ್ವಜನಿಕ ಸಭೆಗಳು ಹಾಗೂ ಮನೆಮನೆಗೆ ಭೇಟಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಮತಯಾಚಿಸಿದರು.**

ಜನಸಾಮಾನ್ಯರೊಂದಿಗೆ ನೇರವಾಗಿ ಸಂವಾದ ನಡೆಸಿದ ಅವರು, ಮೈತ್ರಿ ಸರ್ಕಾರದ ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ



ಜನಪರ ಯೋಜನೆಗಳನ್ನು ವಿವರಿಸಿದರು. ಸಭೆಯಲ್ಲಿ ಮಾತನಾಡಿದ ಅವರು, ಶಿಕ್ಷಣ, ಆರೋಗ್ಯ, ಕೃಷಿ ಹಾಗೂ ಮೂಲಸೌಕರ್ಯ



ಅಭಿವೃದ್ಧಿಗೆ ಕಾಂಗ್ರೆಸ್?ಡಿಎಂಕೆ ಮೈತ್ರಿ ಸದಾ ಬದ್ಧವಾಗಿದೆ ಎಂದು ತಿಳಿಸಿದರು. ರಾಜ್ಯ ಮತ್ತು ಕೇಂದ್ರ ಮಟ್ಟದಲ್ಲಿ ಜನರ ಹಿತಾಸಕ್ತಿಯನ್ನು ಕಾಪಾಡುವ ಶಕ್ತಿಯಾಗಿ ಮೈತ್ರಿ ಪಕ್ಷಗಳು ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು.

ಪ್ರಚಾರ ವೇಳೆ ಮಹಿಳೆಯರು, ಯುವಕರು ಹಾಗೂ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಅಭ್ಯರ್ಥಿಗೆ ಬೆಂಬಲ ಸೂಚಿಸಿದರು. ಕಾರ್ಯಕರ್ತರು ಘೋಷಣೆ ಕೂಗಿ ಉತ್ಸಾಹಭರಿತ ವಾತಾವರಣ ನಿರ್ಮಿಸಿದರು. ಈ ಸಂದರ್ಭದಲ್ಲಿ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಹಾಗೂ ದ್ರಾವಿಡ ಮುನ್ನೇತ್ರ ಕಳಘಂ ಪಕ್ಷದ ಜಿಲ್ಲಾ ಮುಖಂಡರು, ಬ್ಲಾಕ್ ಅಧ್ಯಕ್ಷರು, ಸ್ಥಳೀಯ ನಾಯಕರು ಹಾಗೂ ಅಪಾರ ಸಂಖ್ಯೆಯ ಸಾರ್ವಜನಿಕರು ಉಪಸ್ಥಿತರಿದ್ದರು. ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿ ಭರ್ಜರಿ ಜಯ ಸಾಧಿಸಲಿದ್ದಾರೆ ಎಂಬ ವಿಶ್ವಾಸವನ್ನು ನಾಯಕರು ವ್ಯಕ್ತಪಡಿಸಿದರು.


## ಮಾನ್ವಿ ಪಟ್ಟಣ ಸೌಹಾರ್ದ ಸಹಕಾರಿ (ಶಾಖೆ ಬಳ್ಳಾರಿ)ಬ್ಯಾಂಕ್‌ನಲ್ಲಿ ಕೋಟ್ಯಂತರ ವಂಚನೆ

# ಕಿರಿಯ ಸಹಾಯಕ ವ್ಯವಸ್ಥಾಪಕನಿಂದ 7.55 ಕೋಟಿ ದುರುಪಯೋಗ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: ಬಳ್ಳಾರಿ ಶಾಖೆಯ ಮಾನ್ವಿ ಪಟ್ಟಣ ಸೌಹಾರ್ದ ಸಹಕಾರಿ ಬ್ಯಾಂಕ್‌ನಲ್ಲಿ ನಡೆದ ಕೋಟ್ಯಂತರ ಹಣದ ವಂಚನೆ ಪ್ರಕರಣ ಬ್ಯಾಂಕ್ ವಲಯದಲ್ಲಿ ಆತಂಕ ಮೂಡಿಸಿದೆ. ಬ್ಯಾಂಕ್‌ನ ಕಿರಿಯ ಸಹಾಯಕ ವ್ಯವಸ್ಥಾಪಕರಾಗಿದ್ದ ಎಂ. ರಮೇಶ್ ಎಂಬಾತ ನಕಲಿ ದಾಖಲೆಗಳು ಹಾಗೂ ಕೃತಕ ಸಹಿಗಳನ್ನು ಬಳಸಿ ದೊಡ್ಡ ಮಟ್ಟದ ಹಣ ದುರುಪಯೋಗ ನಡೆಸಿರುವುದು ಆಂತರಿಕ ಪರಿಶೀಲನೆಯ ವೇಳೆ ಬೆಳಕಿಗೆ ಬಂದಿದೆ.**

ಆಂತರಿಕ ಪರಿಶೀಲನೆಯಲ್ಲಿ ಬಯಲು ಬ್ಯಾಂಕ್‌ನ ಲೆಕ್ಕಪತ್ರಗಳ ನಿಯಮಿತ ಪರಿಶೀಲನೆ ವೇಳೆ ಕೆಲವು ಸಾಲ ಖಾತೆಗಳ ಬಗ್ಗೆ ಅನುಮಾನ ಮೂಡಿದ್ದು, ಬಳಿಕ ನಡೆದ ಸಮಗ್ರ ತನಿಖೆಯಲ್ಲಿ ನಕಲಿ ಗ್ರಾಹಕರ ಹೆಸರಿನಲ್ಲಿ ಸಾಲ ಮಂಜೂರು ಮಾಡಿರುವುದು ಪತ್ತೆಯಾಗಿದೆ. ದಾಖಲೆಗಳಲ್ಲಿ ನಮೂದಿಸಲಾದ ಹಲವರು ನಿಜವಾದ ಗ್ರಾಹಕರೇ ಅಲ್ಲ ಎಂಬುದು ತಿಳಿದು ಬಂದಿದೆ. ನಕಲಿ ಸಾಲ ಮಂಜೂರು ಆರೋಪಿ ವಿವಿಧ ದಿನಾಂಕಗಳಲ್ಲಿ ನಕಲಿ ಅರ್ಜಿಗಳನ್ನು ಸೃಷ್ಟಿಸಿ, ಗ್ರಾಹಕರ ಸಹಿಗಳನ್ನು ಕೃತಕವಾಗಿ ಹಾಕಿ ಕೋಟ್ಯಂತರ ರೂಪಾಯಿ ಓವರ್‌ಡ್ರಾಫ್ಟ್ ಸಾಲಗಳನ್ನು ಮಂಜೂರು ಮಾಡಿಕೊಂಡಿದ್ದಾನೆ ಎನ್ನಲಾಗಿದೆ.



ಸಾಲ ಮಂಜೂರಾದ ಹಣವನ್ನು ನೇರವಾಗಿ ತನ್ನ ಕುಟುಂಬ ಸದಸ್ಯರ ಖಾತೆಗಳಿಗೆ ವರ್ಗಾಯಿಸಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ಕುಟುಂಬ ಸದಸ್ಯರ ಖಾತೆಗೆ ಹಣ ವರ್ಗಾವಣೆ ತನಿಖೆಯಲ್ಲಿ ಹೊರಬಂದ ಮಾಹಿತಿ ಪ್ರಕಾರ, ವಂಚನೆಯ ಮೂಲಕ ಪಡೆದ ಹಣವನ್ನು ಆರೋಪಿ ತನ್ನ ತಂದೆ, ತಾಯಿ ಹಾಗೂ ಪತ್ನಿಯ ಬ್ಯಾಂಕ್ ಖಾತೆಗಳಿಗೆ ಹಂತ ಹಂತವಾಗಿ ವರ್ಗಾವಣೆ ಮಾಡಿದ್ದಾನೆ. ಇದರಿಂದ ವಂಚನೆ ಮೊತ್ತವು 7.55 ಕೋಟಿಗೂ ಅಧಿಕ ಎಂದು ಅಂದಾಜಿಸಲಾಗಿದೆ.

ಎಫ್‌ಡಿ ಠೇವಣಿಗಳ ದುರುಪಯೋಗ ಬ್ಯಾಂಕ್‌ನಲ್ಲಿ ಇದ್ದ ಸ್ಥಿರ ಠೇವಣಿಗಳ (FD) ಮೇಲೂ ನಕಲಿ ದಾಖಲೆ ಸೃಷ್ಟಿಸಿ ಸಾಲ ಪಡೆದಿರುವುದು ಪತ್ತೆಯಾಗಿದೆ. ಗ್ರಾಹಕರಿಗೆ ತಿಳಿಯದೇ ಅವರ ಹೆಸರಿನಲ್ಲಿ ಸಾಲ ಎತ್ತಿರುವುದು ಬ್ಯಾಂಕ್ ಗ್ರಾಹಕರಲ್ಲಿ ಆತಂಕ ಉಂಟುಮಾಡಿದೆ. ಪ್ರಕರಣ ದಾಖಲು ಈ ಸಂಬಂಧ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಗೋಪಾಲಕೃಷ್ಣ ಅವರು ಬಳ್ಳಾರಿ ನಗರದ ಎಪಿಎಂಸಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಆರೋಪಿ ಎಂ. ರಮೇಶ್ ಸೇರಿದಂತೆ ಅವರ ತಂದೆ ಎಂ. ಕೃಷ್ಣ, ತಾಯಿ ಜ್ಯೋತಿ ಹಾಗೂ ಪತ್ನಿ ರಂಜಿತಾ ವಿರುದ್ಧ ಪ್ರಕರಣ ದಾಖಲಾಗಿದೆ. ಪೊಲೀಸ್ ಕ್ರಮ ಪೊಲೀಸರು ಬ್ಯಾಂಕ್ ದಾಖಲೆಗಳನ್ನು ವಶಕ್ಕೆ ಪಡೆದು ತನಿಖೆ ಆರಂಭಿಸಿದ್ದು, ಹಣ ವರ್ಗಾವಣೆ ವಿವರಗಳು, ಬ್ಯಾಂಕ್ ವ್ಯವಹಾರಗಳ ಡಿಜಿಟಲ್ ದಾಖಲೆಗಳು ಹಾಗೂ ಸಂಬಂಧಿತ ಖಾತೆಗಳ ಪರಿಶೀಲನೆ ನಡೆಯುತ್ತಿದೆ. ಅಗತ್ಯವಿದ್ದಲ್ಲಿ ಮತ್ತಷ್ಟು ಆರೋಪಿಗಳನ್ನು ಸೇರಿಸುವ ಸಾಧ್ಯತೆಯೂ ಇದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಗ್ರಾಹಕರಲ್ಲಿ ಆತಂಕ ಘಟನೆಯ ಬಳಿಕ ಬ್ಯಾಂಕ್ ಗ್ರಾಹಕರು ತಮ್ಮ ಠೇವಣಿಗಳ ಸುರಕ್ಷತೆ ಬಗ್ಗೆ ಆತಂಕ ವ್ಯಕ್ತಪಡಿಸಿದ್ದು, ಬ್ಯಾಂಕ್ ಆಡಳಿತ ಮಂಡಳಿ ಗ್ರಾಹಕರ ಹಿತಾಸಕ್ತಿ ಕಾಪಾಡಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದೆ.


# ಬೆಂಗಳೂರು–ಮುಂಬೈ ನಡುವಿನ ವಂದೇ ಭಾರತ್ ಸ್ಲೀಪರ್ ಟ್ರೈನ್ ಸಂಚಾರಕ್ಕೆ ಕೇಂದ್ರ ಅನುಮೋದನೆ ರಾಯಚೂರು ಮಾರ್ಗವಾಗಿ ಓಡಿಸಲು ಒಪ್ಪಿಗೆ ನೀಡಲಿ: ಡಾ.ಬಾಬುರಾವ್ ಮನವಿ.

❑ ನೈಜ್ಯ ದೆಸೆ ನ್ಯೂಸ್

**ಬಹು ನಿರೀಕ್ಷಿತ ಬೆಂಗಳೂರು ಮತ್ತು ಮುಂಬೈ ನಗರಗಳ ನಡುವೆ ವಂದೇ ಭಾರತ್ ಸ್ಲೀಪರ್ ಟ್ರೈನ್ ಸಂಚಾರಕ್ಕೆ ಕೇಂದ್ರ ಸರಕಾರ ಅನುಮೋದನೆ ನೀಡಿರುವುದು ಸ್ವಾಗತಾರ್ಹವಾಗಿದೆ ಎಂದು ರೈಲ್ವೆ ಸಲಹಾ ಸಮಿತಿ ಮಾಜಿ ಸದಸ್ಯ ಡಾ. ಬಾಬುರಾವ್ ಅವರು ಸಂತಸ ವ್ಯಕ್ತಪಡಿಸಿದ್ದಾರೆ. ತಾವು ಈ ರೈಲು ಓಡಿಸುವಂತೆ ರೈಲ್ವೆ ಸಚಿವ ಶ್ರೀ ಅಶ್ವಿನ್ ವೈಷ್ಣವ್ ಜಿ ಅವರಿಗೆ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವರಾದ ಶ್ರೀ ವಿ. ಸೋಮಣ್ಣ ಅವರಿಗೆ ಮನವಿ ಸಲ್ಲಿಸಿದ್ದರು.**

ಅದೇ ರೀತಿಯಲ್ಲಿ ಬೆಂಗಳೂರು ಸೆಂಟ್ರಲ್ ಕ್ಷೇತ್ರದ ಸಂಸದ ಶ್ರೀ ಪಿ.ಸಿ. ಮೋಹನ್ ಅವರು ಸಹ ಬೆಂಗಳೂರು ಮತ್ತು ಮುಂಬೈ ನಡುವೆ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗುವಂತೆ ವಂದೇ ಭಾರತ್ ಸ್ಲೀಪರ್ ಟ್ರೈನ್ ಸೌಲಭ್ಯ ಕಲ್ಪಿಸಬೇಕೆಂದು ಮನವಿ ಮಾಡಿದ್ದರು. ಬೆಂಗಳೂರು – ಮುಂಬೈ ನಡುವೆ ಸುಮಾರು 976 ಕಿಲೋಮೀಟರ್ಗಳ ಅಂತರವಿದೆ. ಈ ಎರಡು ಮಹಾ ನಗರಗಳ ನಡುವೆ ಈಗ ಸಂಚರಿಸುವ ರೈಲುಗಳು 24 ರಿಂದ 30 ತಾಸುಗಳನ್ನು ತೆಗೆದುಕೊಳ್ಳುತ್ತವೆ. ಕಡಿಮೆ ಅವಧಿಯಲ್ಲಿ ಎರಡು ನಗರಗಳ ನಡುವೆ ಸಂಚರಿಸಲು ಅನುಕೂಲವಾಗುವಂತೆ ವಂದೇ ಭಾರತ್ ಸ್ಲೀಪರ್ ಟ್ರೈನ್ ಸೌಲಭ್ಯ ಕಲ್ಪಿಸುವಂತೆ ಮನವಿ ಮಾಡಿಕೊಳ್ಳಲಾಗಿತ್ತು.

ಈಗ ಬೆಂಗಳೂರು ಮತ್ತು ಮುಂಬೈ ನಡುವೆ ವಂದೇ ಭಾರತ್ ಸ್ಲೀಪರ್ ಟ್ರೈನ್ ಸಂಚಾರಕ್ಕೆ ಕೇಂದ್ರ ಸರಕಾರ ಅನುಮೋದನೆ ನೀಡಿದೆ. ಈ ಟ್ರೈನ್ ಗಂಟೆಗೆ 220 ಕಿಮೀ ಚಲಿಸುತ್ತದೆ . ಇದರ ವೇಳಾಪಟ್ಟಿ, ಮಾರ್ಗ ಮತ್ತು ಯಾವ ದಿನಾಂಕದಿಂದ ವಂದೇ ಭಾರತ್




ಸ್ಲೀಪರ್ ಟ್ರೈನ್ ಸಂಚಾರ ಆರಂಭಿಸಲಿದೆ ಎನ್ನುವ ಮಾಹಿತಿಯನ್ನು ಸದ್ಯದಲ್ಲಿಯೇ ನೀಡುವುದಾಗಿ ಇಲಾಖೆ ತಿಳಿಸಿದೆ. ಹಾಗಾಗಿ ಶ್ರೀ ಬಾಬು ರಾವ್ ಅವರಿಂದ ರಾಜ್ಯದ, ಕಲ್ಯಾಣ ಕರ್ನಾಟಕ ಹಾಗೂ ಈ ಭಾಗದಲ್ಲಿ ಬರುವ ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ ಜನರ ಪರವಾಗಿ ಮನವಿ ಏನೆಂದರೆ ಈ ರೈಲನ್ನು ಹುಬ್ಬಳ್ಳಿ ಮಾರ್ಗವಾಗಿ ಓಡಿಸಿದರೆ 17 ತಾಸು 10 ನಿಮಿಷ ಹಿಡಿಯುತ್ತದೆ,

ಆದರೆ ಅದೇ ಗುಂತಕಲ್, ಮಂತ್ರಾಲಯ, ರಾಯಚೂರು, ಯಾದಗಿರಿ, ಕಲಬುರಗಿ, ಸೋಲಾಪುರ್ ಮಾರ್ಗವಾಗಿ ಸಂಚರಿಸಿದರೆ 15 ತಾಸು 55 ನಿಮಿಷ ತೆಗೆದುಕೊಳ್ಳುತ್ತದೆ. ಅದಲ್ಲದೆ ಪ್ರಸ್ತುತ ಬೆಂಗಳೂರಿನಿಂದ ಮುಂಬೈ ಮಾರ್ಗವಾಗಿ 28 ವರ್ಷಗಳಿಂದ ಓಡಾಡುತ್ತಿರುವ ಉದ್ಯಾನ ಎಕ್ಸಪ್ರೆಸ್ ಒಂದೇ ಇದೆ. ಈ ಮಾರ್ಗದಲ್ಲಿ ನಡೆದರೆ ಗುಂತಕಲ್ ಹತ್ತಿರದ ಪ್ರಸಿದ್ಧ ಶ್ರೀ ಹನುಮಾನ ದೇವಸ್ಥಾನ, ಮಂತ್ರಾಲಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ರಾಯಚೂರು ಶ್ರೀ ಸುಗೂರೇಶ್ವರ, ಕಲ್ಲೂರು ಶ್ರೀ ಮಹಾಲಕ್ಷ್ಮಿ, ನಾರದಗಡ್ಡೆ ಶ್ರೀ ದತ್ತಾತ್ರೇಯ ದೇವಸ್ಥಾನ, ಕಲಬುರಗಿಯಲ್ಲಿ ಶ್ರೀ ಶರಣಬಸಪ್ಪ ದೇವಸ್ಥಾನ, ದತ್ತಪೀಠ ಹಾಗೂ ಬಂದೇನವಾಜ್, ಹಾಗೂ ಸೊಲಾಪೂರ ಸನಿಹದಲ್ಲಿ ಶ್ರೀ ಕೊಲ್ಲಾಪುರ ಮಹಾಲಕ್ಷ್ಮಿ ದೇವಸ್ಥಾನಗಳು ಬರುತ್ತವೆ, ಹಾಗಾಗಿ ರೈಲ್ವೆಗೆ ಹೆಚ್ಚಿನ ಆದಾಯ ನಿರೀಕ್ಷೆ ಇಟ್ಟುಕೊಳ್ಳಬಹುದಾಗಿದ್ದು ರೈಲ್ವೆ ಸಚಿವರು ನಮ್ಮ ಭಾಗದ ಮೂಲಕವೇ ಈ ರೈಲು ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಕೋರಿದ್ದಾರೆ. ಬೆಂಗಳೂರು ಮತ್ತು ಮುಂಬೈ ನಡುವೆ ವಂದೇ ಭಾರತ್ ಸ್ಲೀಪರ್ ಟ್ರೈನ್ ಸಂಚಾರ ಆರಂಭಿಸಿದರೆ ಇದು ರಾಜ್ಯದ ಮೊದಲ ವಂದೇ ಭಾರತ್ ಸ್ಲೀಪರ್ ಟ್ರೈನ್ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಲಿದೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101